ಸಂಪುಟ : 9 ಸಂಚಿಕೆ 206 ಪುಟ : 4 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 206 Pages : 4 Price : 3.00 Tuesday september 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಸೆ.25ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ವಿದ್ಯುತ್ ಉಪಕೇಂದ್ರ ಡಂಬಳ–110 ಕೆವ್ಹಿ ಐಪಿಪಿ ಮೆ.ಸುಜಲಾನ್ ಲಿ., ಹಾರೋಗೇರಿ, ಮೆ.ಎನರ್ಕಾನ್ ಲಿ., ಮೆ.ಅಕಿಲಾಗ್ಯಾ ಸೋಲಾರ, ಮೆ.ಚುರ್ಚಿಹಾಳ ನೀರಾವರಿ, 110 ಕೆವ್ಹಿ ಡಂಬಳ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 33 ಕೆವ್ಹಿ & 11 ಕೆವ್ಹಿ ಮಾರ್ಗಗಳು, 110 ಕೆವ್ಹಿ ವಿದ್ಯುತ್ ಉಪಕೇಂದ್ರ ಮುಂಡರಗಿ – 110 ಕೆ.ವ್ಹಿ. ಐಪಿಪಿ ಮೆ.ವಿಜಯನಗರ ಶುಗರ್ಸ್ ಲಿ., ಮೆ.ಬೀಡನಾಳ ನೀರಾವರಿ, 110 ಕೆ.ವ್ಹಿ. ಮುಂಡರಗಿ ವಿದ್ಯುತ್ ಉಪಕೇಂದ್ರದಿಂದ ಹೊರ ಹೋಗುವ ಎಲ್ಲ 33 & 11ಕೆ.ವ್ಹಿ. ಮಾರ್ಗಗಳು, 110 ಕೆ.ವ್ಹಿ. ವಿದ್ಯುತ್ ಉಪಕೇಂದ್ರ ಶಿಂಗಟಾಲೂರು, 110ಕೆ.ವ್ಹಿ. ಶಿಂಗಟಾಲೂರು ವಿದ್ಯುತ್ ಉಪಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆ. ಕೆ.ವ್ಹಿ. ಮಾರ್ಗಗಳು, 110 ಕೆವ್ಹಿ ಮುಂಡರಗಿ, 110 ಕೆವ್ಹಿ ಡಂಬಳ ಹಾಗೂ 110 ಕೆವ್ಹಿ ಶಿಂಗಟಾಲೂರು ವಿದ್ಯುತ್ ವಿತರಣಾ ಕೇಂದ್ರಗಳಿಂದ ವಿತರಣೆಯಾಗುವ ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ಹಾಗೂ ಮೇಲೆ ತಿಳಿಸಿದ ಎಲ್ಲ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## ಗದಗ–ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 24 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 28 ಪಂಚಾಕ್ಷರಿ ನಗರ 4ನೇ ಕ್ರಾಸ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ರಾಜೀವಗಾಂಧಿ ನಗರ, ಪೊಲೀಸ್ ಸ್ಟೇಷನ ಕೆಳಗಿನ ಭಾಗ, ಗುಂಪಿನ ಮನೆ, ಕಲಾಮಂದಿರ ರೋಡ, ಭಾಂಡಗೆ ಲೈನ್, ಗಾರ್ಡನ್ ಭಾಗ, ಉರ್ದು ಶಾಲೆ ಕೆಲವು ಉಳಿದ ಭಾಗಗಳು.

ವಾರ್ಡ್ ನಂ 22 ದೊಡ್ಡ ಮಸೂತಿ ಭಾಗ, 2000, 1400 1600,1800 ಮನೆಗಳ ಲೈನ್, ಮಸೂತಿ ಸುತ್ತಮುತ್ತಲಿನ ಉಳಿದ ಭಾಗಗಳು. ವಾರ್ಡ್ ನಂ. 30, 34 ಹುಡ್ಕೋ, ಮೂರು ಶಿಳ್ಳಿನ ವಕಾರ, ಕೊರವರ ಓಣಿ, 46 ಪ್ಲಾಟ್, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್, ಕೆಲವು ಉಳಿದ ಭಾಗಗಳು. ವಾರ್ಡ್ ನಂ. 21, 22, 23 ಕಮತರ ಪ್ಲಾಟ್, ಮುನವಳ್ಳಿ ಪ್ಲಾಟ್, ಹಕ್ಕಿ ಪ್ಲಾಟ್, ಖಾರದಬಟ್ಟಿ, ಎಲಿಗಾರ ಪ್ಲಾಟ್, ಮಸೂತಿ, ಲಕ್ಷ್ಮೇಶ್ವರ ಮನೆ ಲೈನ್, ಕರಿಬಿಷ್ಟಿರವರ ಲೈನ್, ತುಪ್ಪದವರ ಲೈನ್, ಶರಣಪ್ಪ ಪಾಟೀಲರವರ ಲೈನ್, ನಾಗಪ್ಪನ ಕಟ್ಟಿ, ರಾಚೋಟೇಶ್ವರ ಗುಡಿ ಮುಂದಿನ ಭಾಗ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 19, 24, 25 ಭಾವಿಯವರ ಲೈನ್, ದುರ್ಗಮ್ಮನ ಗುಡಿ ಭಾಗ–1, ಹಾವನೂರ ಲೈನ್, ಹಿಡ್ಕಿಮಠ ಭಾಗ–1,2, ಭಟ್ಟರ ಲೈನ್, ಕೋಟಿಯವರ ಲೈನ್, ಕಾಗದಗೇರಿ ಹೊಸ ಲೈನ್– ಹಳೆ ಲೈನ್, ಗುಂಜಿನವರ ಲೈನ್ ಮುನ್ಷಿ ಪ್ರೆಸ್, ಖಾನತೋಟ 2 ಭಾಗಗಳು. ವಾರ್ಡ್ ನಂ. 1 ಎಸ ಎಮ ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಡಲೆ ಖರೀದಿಸಿದ ಹಣದಲ್ಲಿ 6.50 ಕೋಟಿ ರೂ ಬಾಕಿ | ಜಿಲ್ಲಾಡಳಿತದೆದುರು ರೈತರ ಪ್ರತಿಭಟನೆ

# ಬಾಕಿ ಹಣ ಕೊಡಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಕಡಲೆ ಖರೀದಿ ವಿಚಾರದಲ್ಲಿ ರೈತರಿಗೆ ಮೋಸವಾಗಿದೆ. ಕಡಲೆ ಖರೀದಿಸಿ, ರೈತರಿಗೆ ಅದರ ಬಾಕಿ ಹಣ 6.50 ಕೋಟಿ ರೂ ಕೊಡದೇ ಸತಾಯಿಸುತ್ತಿರುವವರ ವಿರುದ್ಧ ಜಿಲ್ಲಾಡಳಿತ ಕಠಿಣ ಕ್ರಮವಹಿಸಬೇಕು. ಬಾಕಿ ಉಳಿಸಿಕೊಂಡಿರುವ ಹಣವನ್ನು ಕೂಡಲೇ ರೈತರಿಗೆ ಕೊಡಿಸಬೇಕು. ಇಲ್ಲವಾದಲ್ಲಿ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಮುಂಡರಗಿ ಹಾಗೂ ಗದಗ ತಾಲೂಕಿನ ರೈತರು ಜಿಲ್ಲಾಡಳಿತ ಭವನದ ಎದುರು ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.




ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ರೈತರು ನಗರದ ಚನ್ನಮ್ಮ ವೃತ್ತದ ಬಳಿ ಸೇರಿದ್ದರು. ಅಲ್ಲಿಂದ ಜಿಲ್ಲಾಡಳಿತ ಭವನದವರೆಗೆ ಪಾದಯಾತ್ರೆ ನಡೆಸಿದರಲ್ಲದೆ, ಕೆಲ ಸಮಯ ರಸ್ತೆ ತಡೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದರು. ಬಾಕಿ ಹಣ ಕೊಡಿಸುವಂತೆ ಆಗ್ರಹಿಸಿದ ರೈತ ಮಹಿಳೆಯರು ನೆಲದ ಮೇಲೆ ಕುಳಿತು ಬಾಯಿ ಬಡಿದುಕೊಂಡರೆ, ರೈತರು ಅರೆಬೆತ್ತಲೆಯಾಗಿ ಧಿಕ್ಕಾರ ಕೂಗಿದರು.

ಕಡಲೆ ಖರೀದಿಸಿದ ವ್ಯಕ್ತಿಯಿಂದ ಸಂಬಂಧಿಸಿದ ರೈತರಿಗೆ ಹಣ ಕೊಡಿಸಿ ರೈತರಿಗೆ ನ್ಯಾಯ ಒದಗಿಸಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ಒಂದು ತಿಂಗಳ ಸಮಯಾವಕಾಶ ಕೇಳಿದ್ದಾರೆ. ಆನಂತರವೂ ವಿಳಂಬವಾದರೆ ಜಿ.ಪಂ ಕಚೇರಿಗೆ ಬೀಗ ಹಾಕಿ ಪ್ರತಿಭಟಿಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.




ಎನ್‌ಆರ್‌ಎಲ್‌ಎಂ ಜಿ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಚಂದ್ರಶೇಖರ ಎಲಿಗಾರ, ಆನಂದ ಬೆಳವಣಿಕಿ ಹಾಗೂ ತಾಲೂಕು ತಾಂತ್ರಿಕ ಸಂಯೋಜಕ ಜಗದೀಶ ಕಂಬಾಳಿಮಠ ಎಂಬುವವರು ದಾವಣಗೆರೆಯ ಮಾರುತಿ ಗೌಡ ಎಂಬುವನೊಂದಿಗೆ ಮಧ್ಯಸ್ಥಿಕೆ ವಹಿಸಿ 3,250 ಟನ್ ಕಡಲೆ ಖರೀದಿಸಿದ್ದಾರೆ. ಈ ಪೈಕಿ 13 ಕೋಟಿ ರೂ ಹಣವನ್ನು ಈಗಾಗಲೇ ಪಾವತಿಸಿದ್ದು, ಇನ್ನೂ 6.50 ಕೋಟಿ ರೂ ಹಣ ಬಾಕಿ ಉಳಿದಿದೆ. ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ರೈತರಿಗೆ ಹಣ ಕೊಡಿಸಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ಅತಿಯಾದ ಮಳೆಯಿಂದ ಹೆಸರು, ಗೆಜ್ಜೆ ಶೇಂಗಾ ಬೆಳೆ ಹಾನಿಯಾಗಿದೆ.

ಪ್ರತಿಭಟನೆಯ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ವಿಜಯಕುಮಾರ ಸುಂಕದ, ಮಹಿಳಾ ಗುಂಪಿನ ಮೂಲಕ ರೈತರು ಕಡಲೆ ಖರೀದಿಗೆ ನೀಡಿದ್ದು, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರ ನಿರ್ದೇಶನದಂತೆ ಕಡಲೆ ಖರೀದಿ ನಡೆದಿದೆ. ಖರೀದಿಸಿದ ವ್ಯಕ್ತಿ 9 ತಿಂಗಳು ಕಳೆದರೂ ಹಣ ನೀಡುತ್ತಿಲ್ಲ. ಖರೀದಿ ವೇಳೆ ಎನ್‌ಆರ್‌ಎಲ್‌ಎಂ ಮನವಿಯ ಮೇರೆಗೆ ರೈತರನ್ನು ಪರಿಚಯಿಸಲು ಮಧ್ಯಸ್ಥಿಕೆ ವಹಿಸಿದ್ದ ಸ್ಥಳೀಯ ಮಹಿಳಾ ಸಂಘದ ಸದಸ್ಯರು ಇದರಿಂದ ಒತ್ತಡಕ್ಕೆ ಸಿಲುಕುವಂತಾಗಿದೆ ಎಂದರು.

ಆದರೆ, ಬ್ಯಾಂಕ್‌ಗಳಿಂದ ರೈತರು ಪಡೆದ ಬೆಳೆ ಸಾಲ ಮರುಪಾವತಿಸುವಂತೆ ಅಕಾರಿಗಳು ದಬ್ಬಾಳಿಕೆ ನಡೆಸುತ್ತಿದ್ದಾರೆ. ಸರ್ಕಾರದ ಯಾವುದೇ ಪರಿಹಾರ ಅಥವಾ ಇನ್ನಾವುದೋ ಹಣ ರೈತರ ಖಾತೆಗೆ ಜಮಾ ಆದರೂ, ಆ ಹಣವನ್ನು ತಡೆಹಿಡಿಯುವ ಕೆಲಸ ಮಾಡುತ್ತಿದ್ದಾರೆ ಎಂದು ರೈತರು ಆರೋಪಿಸಿದರು.

ಪ್ರತಿಭಟನೆಯಲ್ಲಿ ನಾರಾಯಣ ಬಿರಸಲ, ಎಸ್.ಬಿ. ಮುಲ್ಲಾ, ಸೋಮನಾಥ ಎಸ್.ಲಮಾಣಿ, ಲಕ್ಷ್ಮೀ ಹಿತ್ತಲಮನಿ, ಸರಸ್ವತಿ ದಾಸರ, ಸರಸ್ವತಿ ಬೆಟಗೇರಿ, ಶಿವಪ್ಪ ಮೂಲಿಮನಿ, ವೆಂಕಣ್ಣ ಮಲ್ಲರೆಡ್ಡಿ, ಸೋಮರಡ್ಡಿ ಹೊಸಮನಿ, ಪಂಚಾಕ್ಷರಯ್ಯ ಬೆಟಗೇರಿಮಠ, ಸಿದ್ದಪ್ಪ ಮುಳ್ಳೂರ, ಬಸವರಾಜ ಬಾಳಿಕಾಯಿ, ಮಂಜುನಾಥ ಗೋಡಿ, ವಾಯ್.ಎನ್. ಕೆಂಚನಗೌಡ್ರ, ಆನಂದ ಸಗರ ಸೇರಿದಂತೆ 450ಕ್ಕೂ ಹೆಚ್ಚು ರೈತರು ಪಾಲ್ಗೊಂಡಿದ್ದರು.

### ಪ್ರಧಾನಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನ

# ಅಭಿಯಾನಕ್ಕೆ ಕೇಂದ್ರದ ಅನುಮೋದನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಿರ್ದಿಷ್ಟ ಮಧ್ಯಸ್ಥಿಕೆಗಳೊಂದಿಗೆ ಮಹತ್ವಾಕಾಂಕ್ಷೆಯ ಜಿಲ್ಲೆಗಳಲ್ಲಿ 63 ಸಾವಿರಕ್ಕೂ ಹೆಚ್ಚು ಬುಡಕಟ್ಟು ಬಹುಸಂಖ್ಯಾತ ಗ್ರಾಮಗಳು ಮತ್ತು ಬುಡಕಟ್ಟು ಹಳ್ಳಿಗಳನ್ನು ಸಂತೃಪ್ತಿಗೊಳಿಸುವ ಗುರಿಗಳನ್ನು ಹೊಂದಿರುವ ಪ್ರಧಾನಮಂತ್ರಿ ಜನಜಾತಿಯ ಉನ್ನತ ಗ್ರಾಮ ಅಭಿಯಾನಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಮಿಷನ್‌ಗಾಗಿ ಬಜೆಟ್ ವೆಚ್ಚವು ಬುಡಕಟ್ಟು ಸಮುದಾಯಗಳ ಸಾಮಾಜಿಕ ಆರ್ಥಿಕ ಸ್ಥಿತಿಯನ್ನು ಸುಧಾರಿಸಲು 79,156 ಕೋಟಿ ರೂ ಇದ್ದು, ಈ ಮಿಷನ್ 549 ಜಿಲ್ಲೆಗಳು ಮತ್ತು 2,740 ಬ್ಲಾಕ್‌ಗಳನ್ನು 30



ರಾಜ್ಯಗಳು/ಯು.ಟಿಗಳಲ್ಲಿ ಎಲ್ಲಾ ಬುಡಕಟ್ಟು ಬಹುಸಂಖ್ಯಾತ ಹಳ್ಳಿಗಳಲ್ಲಿ ಹರಡುತ್ತದೆ. 5 ಕೋಟಿಗೂ ಹೆಚ್ಚು ಬುಡಕಟ್ಟು ಜನರಿಗೆ ಪ್ರಯೋಜನವನ್ನು ನೀಡುತ್ತಿದ್ದು ಕರ್ನಾಟಕ ರಾಜ್ಯದಲ್ಲಿ 28 ಜಿಲ್ಲೆಗಳಲ್ಲಿ 129 ಬ್ಲಾಕ್‌ಗಳನ್ನು ಒಳಗೊಂಡಿದೆ. ಇದರಲ್ಲಿ 1089 ಗ್ರಾಮಗಳು ಒಳಪಡುತ್ತದೆ. ಇದರ ಪ್ರಯೋಜನವನ್ನು 1,55,318 ಜನರು ಪಡೆಯುವ ಗುರಿ ಹೊಂದಿದೆ.

ಪ್ರತಿ ಮನೆಗೂ ಅಥವಾ ಸಮುದಾಯ ಮಟ್ಟದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು, ಆರೋಗ್ಯ ಮತ್ತು ಪೌಷ್ಟಿಕರಣ ವೃದ್ಧಿಗೊಳಿಸುವುದು, ಶಿಕ್ಷಣ ಮತ್ತು ತರಬೇತಿಗಳನ್ನು ನೀಡುವುದು, ವಿದ್ಯುತ್ ಸೌಲಭ್ಯಗಳನ್ನು ಒದಗಿಸುವುದು, ಆರ್ಥಿಕ ಸಬಲೀಕರಣ ಮಾಡುವುದು, ಸಂಪರ್ಕಗಳ ಸೌಲಭ್ಯ ಒದಗಿಸುವುದು ಈ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ 4 ಬ್ಲಾಕ್‌ಗಳು ಇದ್ದು ಮೇಲ್ಮಠ, ಒಡೆಯರ ಮಲ್ಲಾಪೂರ, ಭಾವನೂರು, ಕೆಲೂರು ಗ್ರಾಮಗಳು ಒಳಗೊಂಡಿದೆ. ಈ ಗ್ರಾಮಗಳಲ್ಲಿ ಒಟ್ಟು 533 ಕುಟುಂಬಗಳು ಇರುತ್ತವೆ. ಪ್ರತಿ ಸಚಿವಾಲಯ/ಇಲಾಖೆಯು ಮುಂದಿನ 5 ವರ್ಷಗಳಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕ್ರಿಯಾ ಯೋಜನೆ (ಡಿ.ಎ.ಪಿ.ಎಸ್.ಟಿ) ಅಡಿಯಲ್ಲಿ ಅವರಿಗೆ ಮಂಜೂರು ಮಾಡಲಾದ ನಿಧಿಯ ಮೂಲಕ ಸಮಯಕ್ಕೆ ಸಂಬಂಧಿಸಿ ಯೋಜನೆಯನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಕ್ರಿಯಾ ಯೋಜನೆಯಡಿ (ಡಿ.ಎ.ಪಿ.ಎಸ್.ಟಿ) ಮುಂದಿನ ಐದು ವರ್ಷಗಳಲ್ಲಿ ಮೂಲಸೌಕರ್ಯವನ್ನು ಸಕ್ರಿಯಗೊಳಿಸುವುದು, ಆರ್ಥಿಕ ಸಬಲೀಕರಣದ ಪ್ರಚಾರ, ಉತ್ತಮ ಶಿಕ್ಷಣ ಪ್ರವೇಶದ ಸಾರ್ವತ್ರಿಕೀಕರಣ, ಆರೋಗ್ಯಕರ ಜೀವನ ಮತ್ತು ಗೌರವಾನ್ವಿತ ವೃದ್ಧಾಪ್ಯ ಈ ನಾಲ್ಕು ಗುರಿಗಳನ್ನು ಸಾಧಿಸುವ ಉದ್ದೇಶವನ್ನು ಅಭಿಯಾನವು ಹೊಂದಿದೆ.

## ಮಳೆ ಹಾನಿ ನಿವಾಸಗಳಿಗೆ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ರವಿವಾರ ಸುರಿದ ಮಳೆಯಿಂದಾಗಿ ವಾರ್ಡ್ ನಂ.4ರಲ್ಲಿ ವಾಸಿಸುತ್ತಿರುವ ಮನೆಗಳಿಗೆ ನೀರು ನುಗ್ಗಿ ತೊಂದರೆಯಾದ ಸ್ಥಳಕ್ಕೆ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರು.

ಚರಂಡಿ ನೀರು ಸರಾಗವಾಗಿ ಹರಿದು ಹೋಗುವಂತೆ ನಗರ ಸಭೆಯ ಜೆಸಿಬಿ ಮೂಲಕ ಕಾರ್ಯನಿರ್ವಹಿಸಿ ಕ್ರಮ ಕೈಗೊಂಡರು. ಮಳೆ ಬಂದಾಗ ತೊಂದರೆಯಾಗುವ ಮನೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ಕುರಿತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಅಕ್ಕಿ, ಸಹಾಯಕ ಆಯುಕ್ತ ಗಂಗಪ್ಪ, ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಬಂಡಿವಡ್ಡರ್, ಲೋಕೋಪಯೋಗಿ ಇಲಾಖೆಯ ಪಾಟೀಲ್, ಪರಿಸರ ಅಭಿಯಂತರ ಆನಂದ ಬದಿ, ಆರೋಗ್ಯ ನಿರೀಕ್ಷಕ ಮಕಾನದಾರ್, ಆರ್‌ಓ ನದಾಫ್, ಸಫಾಯಿ ಕರ್ಮಚಾರಿ ನಾಮನಿರ್ದೇಶಕ ಸದಸ್ಯ ರಮೇಶ್ ಕೋಳೂರು, ನಗರಸಭೆ, ಕಂದಾಯ ಮತ್ತು ಪೊಲೀಸ್ ಇಲಾಖೆಯ ಅಧಿಕಾರಿ–ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಸಾರ್ವಜನಿಕರ ಕೆಲಸಗಳಿಗೆ ವಿಳಂಬ
### ವೆಂಕನಗೌಡ ಗೋವಿಂದಗೌಡ್ರ ಆರೋಪ


## ಖಾಯಂ ಪೌರಾಯುಕ್ತರನ್ನು ನೇಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಗೆ ಖಾಯಂ ಪೌರಾಯುಕ್ತರಿಲ್ಲದೆ ಸಾರ್ವಜನಿಕರ ಕೆಲಸಗಳು ವಿಳಂಬವಾಗುತ್ತಿವೆ. ಶೀಘ್ರವೇ ಖಾಯಂ ಪೌರಾಯುಕ್ತರನ್ನು ನೇಮಿಸದಿದ್ದರೆ ಅಕ್ಟೋಬರ್ 3ರಿಂದ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ತಿಳಿಸಿದರು. ಇಲ್ಲಿನ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಗರಸಭೆ ಪೌರಾಯುಕ್ತರಿಲ್ಲದೆ ಸ್ವಚ್ಛತೆ ಕನಸಾಗಿದೆ. ಕೆಳ ಹಂತದ ಅಧಿಕಾರಿಗಳು ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ. ಕಟ್ಟಡ ಪರವಾನಗಿ, ಫಾರ್ಮ್ ನಂ. 3ರ ವಿತರಣೆಯಲ್ಲಿನಗತ್ಯ ವಿಳಂಬವಾಗುತ್ತಿದೆ. ಈ ಬಗ್ಗೆ ಸಾರ್ವಜನಿಕರ ಆಕ್ಷೇಪಣೆಗಳನ್ನೂ ಗಂಭೀರವಾಗಿ ಪರಿಣಿಸುತ್ತಿಲ್ಲ ಎಂದು ಆರೋಪಿಸಿದರು. ಜನಸಾಮಾನ್ಯರು ಸರಕಾರದ ಬಗ್ಗೆ ಅಸಮಾಧಾನಗೊಂಡಿದ್ದಾರೆ. ಆಂತರಿಕ ಕಚ್ಚಾಟದಿಂದ ಕಾಂಗ್ರೆಸ್ ಅಧಿಕಾರ ಕಳೆದುಕೊಳ್ಳಲಿದ್ದು, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತೊಮ್ಮೆ ಮುಖ್ಯಮಂತ್ರಿಯಾಗಿ ರೈತರ ಕಲ್ಯಾಣ ಹಮ್ಮಿಕೊಳ್ಳಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ರಮೇಶ ಹುಣಸಿಮರದ, ಜೋಸೆಫ್ ಉದೋಜಿ, ಪ್ರಫುಲ್ ಪುಣೇಕರ, ಎಂ.ಎಸ್. ಪರ್ವತಗೌಡ್ರ, ನಿಂಗರಾಜ ಪ್ಯಾಟಿ, ಮಹಾಂತೇಶ ಕಣವಿ, ಜಿ.ಎಂ. ಸಂಶಿ, ಸಂತೋಷ ಪಾಟೀಲ, ಜಿ.ಕೆ. ಕೊಳ್ಳಿಮಠ ಇತರರು ಉಪಸ್ಥಿತರಿದ್ದರು.

ಜೆಡಿಎಸ್ ಗದಗ ತಾಲೂಕು ಘಟಕದ ಅಧ್ಯಕ್ಷ ಬಸವರಾಜ ಅಪ್ಪಣ್ಣವರ ಮಾತನಾಡಿ, ಪಕ್ಷವನ್ನು ಬೂತ್ ಮಟ್ಟದಿಂದ ಸಂಘಟಿಸಲು ಇದೇ ಸೆ.25ರಂದು ಬೂತ್ ಮಟ್ಟದಲ್ಲಿ ಸದಸ್ಯತ್ವ ಅಭಿಯಾನ ಆರಂಭವಾಗಲಿದೆ. ಗದಗ ಮತಕ್ಷೇತ್ರದಲ್ಲಿ 50 ಸಾವಿರ ಸದಸ್ಯತ್ವದ ಗುರಿ ಹೊಂದಲಾಗಿದೆ. ಅಭಿಯಾನದ ನಂತರ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರನ್ನು ಆಹ್ವಾನಿಸಿ ಬೃಹತ್ ಸಮಾವೇಶ ನಡೆಸಿ ಪಕ್ಷಕ್ಕೆ ಹೊಸ ಚೈತನ್ಯ ತುಂಬಲಾಗುತ್ತದೆ ಎಂದು ತಿಳಿಸಿದರು.

## ಬಿಜೆಪಿ ಪ್ರಥಮ ಸಂಘಟನಾತ್ಮಕ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ನಗರ ಮಂಡಲ ಯುವ ಮೋರ್ಚಾ ನೂತನ ತಂಡದ ಪ್ರಥಮ ಸಂಘಟನಾತ್ಮಕ ಸಭೆಯು ಪಕ್ಷದ ಜಿಲ್ಲಾ ಕಾರ್ಯಾಲಯದಲ್ಲಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರಡಗಿ ಅವರ ನೇತೃತ್ವದಲ್ಲಿ, ಪಕ್ಷದ ಹಿರಿಯರಾದ ಎಂ.ಎಸ್. ಕರೀಗೌಡ್ರ ಅವರ ಮಾರ್ಗದರ್ಶನದಲ್ಲಿ ಸೋಮವಾರ ಜರುಗಿತು.

ಈ ಸಂದರ್ಭದಲ್ಲಿ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಜಿಲ್ಲಾ ಕಾರ್ಯದರ್ಶಿ ಹಾಗೂ ಗದಗ ನಗರ ಯುವ ಮೋರ್ಚಾ ಕಾರ್ಯದರ್ಶಿ ಧರ್ಮರಾಜ ಕೊಂಚಿಗೇರಿ, ಕಿರಣ ಕಲಾಲ, ಗದಗ ನಗರ ಮಂಡಲ ಯುವ ಮೋರ್ಚಾ ಅಧ್ಯಕ್ಷ ನವೀನ ಕೊಟೆಕಲ್, ಪ್ರಧಾನ ಕಾರ್ಯದರ್ಶಿಗಳಾದ ವಿರೇಶಪ್ರಭು ಗದಗಿನ, ಬಸವರಾಜ ನರೇಗಲ್, ಉಪಾಧ್ಯಕ್ಷರಾದ ಕೃಷ್ಣಾ ಚಿಂತಾ, ಪ್ರವೀಣ ಹಡಪದ, ಆಕಾಶ ಪಾಟೀಲ, ಕಾರ್ಯದರ್ಶಿಗಳಾದ ಶಶಿಧರ ಕಳ್ಳಿ, ರಜತ್ ಭಿಮ್ಕರ್, ಮೋಹನ ವರವಿ, ಚಂದ್ರು ಒಂಟೆತ್ತಿನವರ, ಕಾರ್ತಿಕ ಶಿಗ್ಲಿಮಠ, ಸದಸ್ಯರಾದ ವಿನಾಯಕ ಕಾಟ್ವಾ, ವಿನಾಯಕ ಹೊರಕೇರಿ, ಅಕ್ಷಯ ರೇವಣಕರ್, ಸಂತೋಷ ರಾಮದುರ್ಗ, ಆನಂದ ಬಂಡಿ, ಬಸವರಾಜ ಮಡಿವಾಳರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಹಿಂದೂ ಮಹಾಗಣಪತಿ ವಿಸರ್ಜನೆ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೇಟೆ ಹನುಮಂತದೇವರ ದೇವಸ್ಥಾನದ ಹತ್ತಿರ ಹಿಂದೂ ಮಹಾಗಣಪತಿ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಬೃಹತ್ ಹಾಗೂ ಸುಂದರವಾದ ಗಣೇಶನ ಮೂರ್ತಿಯ ವಿಸರ್ಜನೆ ಕಾರ್ಯಕ್ರಮವು ಸೆ.25ರಂದು ಮದ್ಯಾಹ್ನ 1 ಗಂಟೆಗೆ ಪ್ರಾರಂಭವಾಗಲಿದೆ.

21 ಅಡಿಗೂ ಅಧಿಕ ಎತ್ತರದ ಬೃಹತ್ ಮೂರ್ತಿಯನ್ನು ಹಿಂದೂ ಮಹಾಸಭಾ ಯುವಕರ ತಂಡ ಪ್ರತಿಷ್ಠಾಪಿಸಿದ್ದು, ಸಮಿತಿ ವತಿಯಿಂದ ಸಂಪ್ರದಾಯಬದ್ಧವಾದ ಪೂಜೆ-ಪುನಸ್ಕಾರಗಳನ್ನು ನೆರವೇರಿಸಲಾಗುತ್ತಿದೆ. ಅನೇಕ ಸಾಂಸ್ಕೃತಿಕ, ಸಾಂಪ್ರದಾಯಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗಮನ ಸೆಳೆಯುತ್ತಿದೆ. ಬುಧವಾರ ಮದ್ಯಾಹ್ನ 1 ಗಂಟೆಗೆ ಅದ್ಧೂರಿ ಮೆರವಣಿಗೆಯು ಪಟ್ಟಣದ ಹಾಗೂ ಸುತ್ತಮುತ್ತಲಿನ ಸಾವಿರಾರು ಜನರ ಸಮ್ಮುಖದಲ್ಲಿ ಪ್ರಾರಂಭವಾಗಲಿದ್ದು, ಮೆರವಣಿಗೆಗೆ ಹಲವು ಮುಖಂಡರು ಚಾಲನೆ ನೀಡಲಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಹಿಂದೂ ಮಹಾಗಣಪತಿ ಸಮಿತಿ ಅಧ್ಯಕ್ಷ ಫಕ್ಕೀರೇಶ ಅಣ್ಣಿಗೇರಿ ಮತ್ತು ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರಾಭಿವೃದ್ಧಿಯತ್ತ ಗಮನ ಹರಿಸಲು ಆಗ್ರಹ



■ವಿಜಯಸಾಕ್ಷಿ ಸುದ್ದಿ, ಇಲಕಲ್

ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಇಲಕಲ್ ಘಟಕದ ವತಿಯಿಂದ ನಗರಾಭಿವೃದ್ಧಿ ಹಾಗೂ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ನಗರಸಭೆಯ ಆಯುಕ್ತರಿಗೆ ಬೇಡಿಕೆ ಸಲ್ಲಿಸಿ, ಇಲ್ಲಿನ ನಾಗರಿಕರು ನೀರಿನ ಸಮಸ್ಯೆ, ಹದಗೆಟ್ಟ ರಸ್ತೆಗಳು ಹಾಗೂ ಸ್ವಚ್ಛತೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂಬುದನ್ನು ಮನವರಿಕೆ ಮಾಡಿಕೊಳ್ಳಲಾಯಿತು.

ರಾಜ್ಯ ಕಾರ್ಯದರ್ಶಿ ರಿಜ್ವಾನ್ ಹುಮನಾಬಾದ್, ಜಿಲ್ಲಾ ಉಪಾಧ್ಯಕ್ಷ ಅಫ್ಜಲ್ ಹುಸೇನ್, ನಗರಾಧ್ಯಕ್ಷ ಸಿರಾಜ್ ಹುಣಚಗಿ, ನಗರ ಕಾರ್ಯದರ್ಶಿ ರಫೀಕ್ ಬಳಗಾನೂರ ಮತ್ತು ಮತ್ತಿತರರು ಉಪಸ್ಥಿತರಿದ್ದರು. ಅನ್ವರ್ ಢಾಲಾಯತ್, ಶಹಬಾಜ್ ಅಹ್ಮದ್, ಇರ್ಷಾದ್ ಮುಲ್ಲಾ, ಶೋಯೆಬ್, ಪರ್ವೇಜ್, ಶಂಸುದ್ದಿನ್ ಹಾಗೂ ಹಲವರು ಭಾಗವಹಿಸಿ, ಸಾರ್ವಜನಿಕ ಸಮಸ್ಯೆಗಳ ಪರಿಹಾರದ ಕುರಿತಾಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

### ಯಶಸ್ವಿ ಈದ್ ಮಿಲಾದ್ ಕಾರ್ಯಕ್ರಮ | ಖರ್ಚು-ವೆಚ್ಚಗಳ ಮಾಹಿತಿ ಬಿಡುಗಡೆ

# ದಾನಿಗಳ ಪಾತ್ರ ಬಹುಮುಖ್ಯವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

2024ರ ಮುಹಮ್ಮದ್ ಪೈಗಂಬರ್ ಜಯಂತಿಯನ್ನು ಅತ್ಯಂತ ಯಶಸ್ವಿಯಾಗಿ ಮಾಡಿದ್ದೇವೆ. ಪ್ರತಿವರ್ಷ ಈದ್ ಮಿಲಾದ್ ಕಮಿಟಿ ಮಾಡಿದಾಗಲೆಲ್ಲ ಎಲ್ಲರೂ ಒಂದಿಲ್ಲೊಂದು ನೋವಿನಿಂದ ಹೊರ ಹೋಗುತ್ತಿದ್ದರು. ಆದರೆ, ಈ ಬಾರಿಯ ಎಲ್ಲ ಸದಸ್ಯರು ಯಾವುದೇ ಫಲಾಪೇಕ್ಷೆಗಳಿಲ್ಲದೆ ಖುಷಿಯಿಂದ ಕಾರ್ಯಕ್ರಮ ಯಶಸ್ವಿಗೊಳಿಸಿದ್ದಾರೆ. ಪ್ರಾರಂಭದಿಂದಲೂ ಪರ-ವಿರೋಧ ಚರ್ಚೆಗಳು ಇದ್ದರೂ ಕೂಡ ಎಲ್ಲರನ್ನೂ ಗಮನಕ್ಕೆ ತೆಗೆದುಕೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿದ್ದೇವೆ ಎಂದು 2024ರ ಈದ್ ಮಿಲಾದ್ ಕಮಿಟಿ ಅಧ್ಯಕ್ಷ ಭಾಷಾಸಾಬ್ ಮಲ್ಲಸಮುದ್ರ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸೋಮವಾರ ಈದ್ ಮಿಲಾದ್ ಕಮಿಟಿಯಿಂದ ಖರ್ಚು-ವೆಚ್ಚಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಸಮಾಜ ಕಟ್ಟುವ ನಿಟ್ಟಿನಲ್ಲಿ



ಪೈಗಂಬರ್ ಜಯಂತಿ ಆಚರಿಸಿದ್ದೇವೆ. ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲು ದಾನಿಗಳ ಪಾತ್ರ ಬಹುಮುಖ್ಯವಾಗಿದೆ. ಅವರ ಶ್ರಮದ ಹಣವನ್ನು ವ್ಯರ್ಥ ಮಾಡದೇ ಎಲ್ಲಾ ಲೆಕ್ಕಪತ್ರವನ್ನು ಕರೀಂ ಯಶಸ್ವಿಯಾಗಿ ನಿಭಾಯಿಸಿದ್ದಾರೆ. ಹಿರಿಯರ ಮಾರ್ಗದರ್ಶನದಂತೆ ಸಮಾಜಕ್ಕೆ ಉತ್ತಮ ಅಡಿಪಾಯ ಹಾಕುವ ಕೆಲಸವನ್ನು ಮಾಡಿದ್ದೇವೆ ಎಂದರು.

ನಮ್ಮ ಸಮಾಜದ ಕಾರ್ಯಕ್ರಮಕ್ಕೆ ತಮ್ಮದೇ ಆದ ಕೊಡುಗೆ ನೀಡಲು ಕೆಲವು ದಾನಿಗಳು ಮುಂದೆ ಬಂದು ತಮ್ಮ ಹೆಸರನ್ನು ಬಹಿರಂಗಪಡಿಸದೆ ಸಮಾಜಕ್ಕೆ ಸೇವೆ ಸಲ್ಲಿಸಿದ್ದಾರೆ. ಜಗತ್ತಿನಲ್ಲಿ ತಪ್ಪು ಮಾಡಬಾರದು. ತಪ್ಪು ಮಾಡಿದರೆ ಮುಂದೆ ನಾವು ಅಲ್ಲಾಹು ಬಳಿ ಹೋದಾಗ ಉತ್ತರ ಕೊಡಬೇಕಾಗುತ್ತದೆ. ಹಾಗಾಗಿ ಯಾವುದೇ ಕಾರ್ಯ ಮಾಡಿದರೂ ಕೂಡ ನಿಸ್ವಾರ್ಥದಿಂದ ಮಾಡಬೇಕು. ಈಗಾಗಲೇ ನಾವು ಪೈಗಂಬರ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿದ್ದೇವೆ. ಇದರ ಲೆಕ್ಕಪತ್ರಗಳ ಅಡಾವ್ ನಮ್ಮ ಸಮಾಜದ ಮುಂದೆ ಇಡುತ್ತಿದ್ದೇವೆ ಎಂದರು.

ಪೈಗಂಬರ್ ಜಯಂತಿ ಅಂಗವಾಗಿ ಬಹಿರಂಗ ಸಭೆಯನ್ನು ಯಶಸ್ವಿಯಾಗಿ ನಿಭಾಯಿಸಿದ್ದೇವೆ. ಮುಂಬರುವ ವರ್ಷದಲ್ಲಿ ಯಾರೇ ಕಾರ್ಯಕ್ರಮ ಮಾಡಿದರೂ ನಾವು ಅವರಿಗೆ ಸಹಾಯ-ಸಹಕಾರ ನೀಡುತ್ತೇವೆ. ಸಮಾಜದ ಹೆಸರಿನಲ್ಲಿ ಸಮುದಾಯ ಭವನ ನಿರ್ಮಾಣ ಮಾಡಬೇಕು ಎನ್ನುವುದು ನಮ್ಮ ಕನಸಾಗಿದೆ. ಸಮುದಾಯ ಭವನ ನಿರ್ಮಾಣವಾದರೆ ಸಮಾಜಕ್ಕೆ ಆಸ್ತಿ ಮಾಡಿದಂತಾಗುತ್ತದೆ. ಮುಂದೆ ನಮಗೆ ಯಾವುದೇ ಜವಾಬ್ದಾರಿ ನೀಡಿದರೂ ಕೂಡ ಯಶಸ್ವಿಯಾಗಿ ನಡೆಸಲು ನಾವು ಸಿದ್ಧರಿದ್ದೇವೆ. ನಮಗೆ ಸ್ಥಾನ ಮುಖ್ಯವಲ್ಲ, ಸಮಾಜದ ಕೆಲಸ ಮುಖ್ಯವಾಗಿರುತ್ತದೆ. ಸ್ಥಾನಕ್ಕೆ ಅಪೇಕ್ಷೆ ಪಡದೆ ಕೆಲಸ ನಿರ್ವಹಿಸಲು ಈಗಿರುವ ಎಲ್ಲಾ ಕಮಿಟಿಯವರು ಸಿದ್ಧರಿದ್ದೇವೆ ಎಂದು ತಮ್ಮ ಸಮುದಾಯಕ್ಕೆ ಭಾಷಾಸಾಬ್ ಮಲ್ಲಸಮುದ್ರ ಭರವಸೆ ನೀಡಿದರು.

**ಜಮಾ ಮತ್ತು ಖರ್ಚಾದ ಮೊತ್ತ**

* ಕಮಿಟಿಯ ಹಣ: 84,000 ರೂ.
* ಸಾರ್ವಜನಿಕರಿಂದ ಸಂಗ್ರಹವಾದ ಹಣ: 3,32,044 ರೂ.
* ಒಟ್ಟು ಹಣ: 4,16,044 ರೂ.
* ಒಟ್ಟು ಖರ್ಚು: 4,02,700 ರೂ.
* ನಿವ್ವಳ ಉಳಿತಾಯ: 13,344 ರೂ.

# ಧರ್ಮಸಭೆ, ಸಾಂಸ್ಕೃತಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವೀರೇಶ್ವರ ಲೈಬ್ರರಿ ಹತ್ತಿರ ಸ್ಥಾಪಿಸಲಾಗಿರುವ ಹಿಂದೂ ಮಹಾಗಣಪತಿ ಸನ್ನಿಧಿಯಲ್ಲಿ ಧರ್ಮಸಭೆ, ನೃತ್ಯ ಸಂಗೀತ ವೈಭವ ಹಾಗೂ ಸನ್ಮಾನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ರಾಷ್ಟ್ರ ಪ್ರಶಸ್ತಿ ಪಡೆದ ಮಂಗಳೂರಿನ ಹೆಜ್ಜೆನಾದ



ತಂಡದಿಂದ ನೃತ್ಯ ಮತ್ತು ಸಂಗೀತ ವೈಭವ ಕಾರ್ಯಕ್ರಮ ಜರುಗಿತು. ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು.

ಮಂಡಳಿಯ ಗೌರವಾಧ್ಯಕ್ಷರಾದ ಎಸ್.ಎಚ್. ಶಿವನಗೌಡರ್, ಅಧ್ಯಕ್ಷರಾದ ಸುಧೀರ ಕಾಟಿಗಾರ್, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಹಬೀಬ, ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ರಾಜು ಕುರುಡಗಿ, ಉಪಾಧ್ಯಕ್ಷರಾದ ಅಶ್ವಿನಿ ಜಗತಾಪ್, ವಂದನಾ ವರ್ಣೇಕರ್, ರವಿ ರಾಜ್ ಮಾಳಕೊಪ್ಪಮಠ, ಸಂತೋಷ್ ಮೇಲಗಿರಿ, ಸಾಗರ್ ಪವಾರ್, ಕಮಲೇಶ್ ಜರಿವಾಲಾ, ಜಗನ್ನಾಥಸಾ ಭಾಂಡಗೆ, ಪಕೀರಸಾ ಬಾಡಗೆ, ಸುರೇಶ್ ಮೇದಾರ್, ಉಮೇಶ್ ಹಡಪದ್ ಸೇರಿದಂತೆ ಅನೇಕ ಪದಾಧಿಕಾರಿಗಳು ಭಾಗವಹಿಸಿದ್ದರು.

### 15ನೇ ಹಣಕಾಸು ಯೋಜನೆಯಡಿ ಸಾಮಾಜಿಕ ಲೆಕ್ಕ ಪರಿಶೋಧನಾ ಗ್ರಾಮ ಸಭೆ

# ಅನುದಾನದ ಸಮರ್ಪಕ ಬಳಕೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 2024-25ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹಾಗೂ 15ನೇ ಹಣಕಾಸು ಯೋಜನೆಯಡಿ ಸಾಮಾಜಿಕ ಲೆಕ್ಕ ಪರಿಶೋಧನಾ ಗ್ರಾಮ ಸಭೆಯನ್ನು ಗ್ರಾಮದ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ನಡೆಯಿತು.

ಯೋಜನೆಗಳ ಬಗ್ಗೆ ತಾಲೂಕು ಕಾರ್ಯಕ್ರಮದ ವ್ಯವಸ್ಥಾಪಕ ಸಂತೋಷ ಪಾಟೀಲ್ ಮಾತನಾಡಿ ಈ ಯೋಜನೆ ನಡೆದುಬಂದ ದಾರಿಯನ್ನು ವಿವರಿಸಿದರು. ಕೂಲಿ ಕಾರ್ಮಿಕರಿಗೆ ಕೆಲಸದ ವೆಚ್ಚ 51,26,797 ರೂ, ಸಾಮಗ್ರಿ ವೆಚ್ಚ 14,92,222 ರೂ ಒಟ್ಟು ಅನುದಾನದಲ್ಲಿ 66,19,019 ರೂ ಬಳಕೆಯಾಗಿದ್ದು



ಒಟ್ಟು 67 ಕಾಮಗಾರಿಗಳು ಅನುಷ್ಠಾನಗೊಂಡಿವೆ. ಅದರಲ್ಲಿ 26 ಕಾಮಗಾರಿಗಳ ಕೆಲಸ ಮಾಡದೆ ಇರುವ ಕಾರಣ 45774 ರೂಪಾಯಿ ಹಣವನ್ನು ಸರ್ಕಾರಕ್ಕೆ ವಾಪಸ್ ಭರಣೆ ಮಾಡಬೇಕು ಹೇಳಿದರು.

ಎರಡನೇ ಪ್ರಕರಣಗಳಿಗೆ ಸಂಬಂಧಿಸಿದಂತೆ 2,83,516 ರೂಪಾಯಿ ಹಣವನ್ನು ಆಕ್ಷೇಪಣೆಗೆ ತೀರ್ಮಾನಿಸಲಾಯಿತು. ಇದರಲ್ಲಿ ಅಳತೆ ಪುಸ್ತಕ ಇರುವುದಿಲ್ಲ ಮತ್ತು ಕಾಮಗಾರಿ ನಡೆದ ಸ್ಥಳವನ್ನು ತೋರಿಸಿಲ್ಲ. ಕಾಮಗಾರಿ ಕಡತ ಹಾಜರುಪಡಿಸದೆ ಇರುವುದು ಒಳಗೊಂಡಿರುತ್ತದೆ ಎಂದು ಹೇಳಿದರು.

ಸಾರ್ವಜನಿಕರು ಸಭೆಯಲ್ಲಿ ಎದ್ದು ನಿಂತು ಗ್ರಾಮದ ಪ್ರಮುಖ ಸಮಸ್ಯೆಗಳ ಕುರಿತು ಪ್ರಶ್ನಿಸಿದಾಗ, ಗ್ರಾ.ಪಂ ಸದಸ್ಯರು ಹಾಗೂ ಉಪಾಧ್ಯಕ್ಷರು ಸಾರ್ವಜನಿಕರ ಮೇಲೆ ಏಕವಚನದಲ್ಲಿ ಮಾತನಾಡಿರುವುದು ಹಲವರ ಅಸಮಾಧಾನಕ್ಕೆ ಕಾರಣವಾಯಿತು. ಈ ಬಗ್ಗೆ ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ಗ್ರಾಮ ಪಂಚಾಯಿತಿ ಸದಸ್ಯರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರಾದ ಹನುಮಪ್ಪ ಭೀಮನೂರ, ಬಸಪ್ಪ ಬಿಚಗಲ್ಲ್, ಭೀಮಪ್ಪ ಕಂಕರಿ, ಬಸಪ್ಪ ಗುಡಮಿ, ಚನ್ನಪ್ಪ ಗದಗ ಶಿವಕುಮಾರ ಯತ್ನಟ್ಟಿ, ರಾಮಣ್ಣ ಖಂಡ್ರೆ, ಹನುಮಪ್ಪ ತಳವಾರ, ಕಪ್ಪತ್ತಪ್ಪ ಸೋಂಪೂರ, ಮುದ್ದುಕಪ್ಪ ದೇವರವರ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಬಾಬರಿ ಆಗ್ರಹಿಸಿದ್ದಾರೆ.

ಕೃಷಿ ಇಲಾಖೆಯ ಅಧಿಕಾರಿ ವೀರಣ್ಣ ಗಡಾದ ಮಾತನಾಡಿ, ರೈತರಿಗೆ ಕೃಷಿ ಇಲಾಖೆಯಲ್ಲಿ ಅನೇಕ ಯಂತ್ರಗಳು ಬಂದಿವೆ. ಬೀಜಗಳು, ರಸಗೊಬ್ಬರ ಕೀಟನಾಶಕಗಳು ಸಬ್ಸಿಡಿ ದರದಲ್ಲಿ ಸಿಗುತ್ತಿವೆ. ಇವುಗಳ ಪ್ರಯೋಜ ಪಡೆಯಬಹುದು ಎಂದರು.

# ದಸರಾ ಕ್ರೀಡಾಕೂಟದಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ದಸರಾ ಕ್ರೀಡಾಕೂಟದಲ್ಲಿ ವಿಜಯ ಪದವಿಪೂರ್ವ ವಿದ್ಯಾರ್ಥಿನಿಯರಾದ ದೀಪಾ ಜಕ್ಕಲಿ 3000 ಮೀ ಓಟದಲ್ಲಿ ತೃತೀಯ ಸ್ಥಾನವನ್ನು ಹಾಗೂ ರಂಜಿತಾ ದಾವಣಗೇರಿ ಎತ್ತರ ಜಿಗಿತದಲ್ಲಿ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ವಿಜಯ ಫೈನ್ ಆರ್ಟ್ ಸಂಸ್ಥೆಯ ಅಧ್ಯಕ್ಷರಾದ ಅಶೋಕ ಟಿ.ಅಕ್ಕಿ,



ಕಾರ್ಯದರ್ಶಿ ಸಂತೋಷ ಅಕ್ಕಿ, ಮುಖ್ಯಸ್ಥರಾದ ಸಾಗರಿಕ ಅಕ್ಕಿ, ಪ್ರಾಚಾರ್ಯರಾದ ಶ್ರೀದೇವಿ ಯರಗಂಬಳಿಮಠ ಹಾಗೂ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.

### 2019ರಿಂದ 2023ರವರೆಗಿನ ಟಿಎಸ್‌ಆರ್, ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ ಪ್ರಕಟ

# ಶೀಘ್ರದಲ್ಲೇ ಪ್ರಶಸ್ತಿ ಪ್ರದಾನ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ಪತ್ರಿಕೋದ್ಯಮದಲ್ಲಿ ಅನುಪಮ ಸೇವೆ ಸಲ್ಲಿಸಿದ ಪತ್ರಕರ್ತರಿಗೆ ನೀಡುವ ಟಿ.ಎಸ್.ರಾಮಚಂದ್ರರಾವ್ (ಟಿಎಸ್‌ಆರ್)ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಕನ್ನಡ ಪತ್ರಿಕೆ ಅಥವಾ ಪತ್ರಿಕಾ ಸಮೂಹವನ್ನು ಕಟ್ಟಿ ಬೆಳೆಸಿದ ಪತ್ರಕರ್ತರ ಸಾಧನೆ ಗುರುತಿಸಿ ನೀಡುವ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿದೆ.

ಟಿಯೆಸ್ಸಾರ್ ಪತ್ರಿಕೋದ್ಯಮ ಪ್ರಶಸ್ತಿ: ಕನ್ನಡ ಪತ್ರಿಕೋದ್ಯಮದಲ್ಲಿ ಅನುಪಮ ಸೇವೆ ಸಲ್ಲಿಸುವ ಪತ್ರಕರ್ತರೊಬ್ಬರಿಗೆ ಟಿಯೆಸ್ಸಾರ್ ನೆನಪಿನಲ್ಲಿ 1993ರಿಂದ ಕರ್ನಾಟಕ ಸರ್ಕಾರ ಪ್ರತಿ ವರ್ಷ 'ಟಿಯೆಸ್ಸಾರ್ ಪತ್ರಿಕೋದ್ಯಮ ಪ್ರಶಸ್ತಿ' ನೀಡುತ್ತಿದೆ. ಈ ಪ್ರಶಸ್ತಿ ಮೊತ್ತ 2 ಲಕ್ಷ ರೂಪಾಯಿಗಳು ನಗದು ಹಾಗೂ ಸ್ಮರಣಿಕೆಗಳನ್ನು ಒಳಗೊಂಡಿದೆ.

2019ನೇ ಸಾಲಿಗೆ ಶಿವಾಜಿ ಎಸ್.ಗಣೇಶನ್, 2020ನೇ ಸಾಲಿಗೆ ಶ್ರೀಕಾಂತಾಚಾರ್ಯ ಆರ್.ಮಣೂರ, 2021ನೇ ಸಾಲಿಗೆ ಡಾ. ಆರ್.ಪೂರ್ಣಿಮಾ, 2022ನೇ ಸಾಲಿಗೆ ಡಾ.ಪದ್ಮರಾಜ ದಂಡಾವತಿ, 2023ನೇ ಸಾಲಿಗೆ



ಡಾ. ಸರಜೂ ಕಾಟ್ಕರ್ ಇವರುಗಳು ಆಯ್ಕೆಯಾಗಿದ್ದಾರೆ.

ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ: ಕನ್ನಡ ಪತ್ರಿಕಾ ರಂಗದ ಭೀಷ್ಮ ಎಂದೇ ಹೆಸರಾದ ಮೊಹರೆ ಹಣಮಂತರಾಯರು 1892ರ ನವೆಂಬರ್ 12ರಂದು ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿಯಲ್ಲಿ ಜನಿಸಿದರು. ವಿಜಯಪುರದಲ್ಲೇ ಶಿಕ್ಷಣ ಪೂರೈಸಿದ ಅವರು, ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡು ಸೆರೆಮನೆವಾಸವನ್ನೂ ಅನುಭವಿಸಿದವರು. ನಿಷ್ಠುರ ಪತ್ರಿಕೋದ್ಯಮಕ್ಕೆ ಹೆಸರಾದವರು.

ಕನ್ನಡ ಪತ್ರಿಕೆ ಅಥವಾ ಪತ್ರಿಕಾ ಸಮೂಹವನ್ನು ಕಟ್ಟಿ ಬೆಳೆಸಿದ ಪತ್ರಕರ್ತರ ಸಾಧನೆಯನ್ನು ಗುರುತಿಸಿ. ಇವರ ಸ್ಮರಣಾರ್ಥ 'ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ'ಯನ್ನು ಕರ್ನಾಟಕ ಸರ್ಕಾರವು 2010ರಿಂದ ಪ್ರತಿ ವರ್ಷ ನೀಡುತ್ತಿದೆ. ಈ ಪ್ರಶಸ್ತಿಯು 2 ಲಕ್ಷ ರೂ. ನಗದು ಪುರಸ್ಕಾರವನ್ನು ಒಳಗೊಂಡಿದೆ.

2019ನೇ ಸಾಲಿಗೆ ರಾಜೀವ್ ಕಿದಿಯೂರ, 2020ನೇ ಸಾಲಿಗೆ ಇಂದೂಧರ ಹೊನ್ನಾಪುರ, 2021ನೇ ಸಾಲಿಗೆ ಎನ್. ಮಂಜುನಾಥ, 2022ನೇ ಸಾಲಿಗೆ ಚಂದ್ರಶೇಖರ್ ಪಾಲೆತ್ತಾಡಿ, 2023ನೇ ಸಾಲಿಗೆ ಶಿವಲಿಂಗಪ್ಪ ದೊಡ್ಡಮನಿ ಇವರುಗಳನ್ನು ಆಯ್ಕೆ ಮಾಡಲಾಗಿದೆ.

ಪ್ರಶಸ್ತಿ ವಿಜೇತರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಶೀಘ್ರದಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್. ದೇಸಾಯಿ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಹಿರಿಯ ಪತ್ರಕರ್ತರಾದ ಡಾ.ಈಶ್ವರ ದೈತೋಟ, ಶಾಂತಲಾ ಧರ್ಮರಾಜ್, ಎಂ.ಎಸ್. ಮಣಿ ಹಾಗೂ ಸದಸ್ಯ ಕಾರ್ಯದರ್ಶಿಗಳಾದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ಎಂ.ನಿಂಬಾಳ್ಕರ್ ಅವರಿದ್ದರು.

# ರವಿವರ್ಮ ಪೇಂಟರ್ಸ್ ಸಂಘದ ವಾರ್ಷಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ರವಿವರ್ಮ ಪೇಂಟರ್ಸ್ ಸಂಘದ ವಾರ್ಷಿಕೋತ್ಸವ ಕಾರ್ಯಕ್ರಮದ ಅಂಗವಾಗಿ ದರಪಟ್ಟಿ ಬಿಡುಗಡೆ ಹಾಗೂ ಕ್ರಿಕೆಟ್ ಪಂದ್ಯಾವಳಿಯನ್ನು ನಗರದ ಚೈತನ್ಯ ಕ್ಯಾಂಟಿನ್ ಹತ್ತಿರವಿರುವ ಆ್ಯಂಗ್ಲೋ ಉರ್ದು ಪ್ರಾಥಮಿಕ ಶಾಲಾ ಮೈದಾನದಲ್ಲಿ ಆಯೋಜಿಸಲಾಗಿತ್ತು.

ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘದ ಅಧ್ಯಕ್ಷ ಮಾಬುಬಖಾನ ಜಿ. ಪಠಾಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಟ್ಟಡ ಕಾರ್ಮಿಕರು ದಿನನಿತ್ಯ ತಮ್ಮ ಕೆಲಸದಲ್ಲಿ ತೊಡಗಿ-ಕೊಂಡು ಕಟ್ಟಡ ನಿರ್ಮಾಣ ಮಾಡಿಕೊಡುವುದಲ್ಲದೇ ಸುಂದರವಾಗಿ ಬಣ್ಣ ಬಳಿದು ಸುಂದರಗೊಳಿಸುವಲ್ಲಿ ನಿರತರಾಗಿದ್ದಾರೆ. ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ




ಇಂತಹ ಕ್ರೀಡೆಗಳನ್ನು ಆಯೋಜನೆ ಮಾಡಿ ಕಾರ್ಮಿಕರಿಗೆ ಆರೋಗ್ಯ ಮತ್ತು ಸ್ಫೂರ್ತಿ ನೀಡುವ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಮಸ್ತ ಕಟ್ಟಡ ಕಾರ್ಮಿಕರ ಸಂಘಟನೆಗಳ ಅಧೀಕ್ಷಕರು ದರಪಟ್ಟಿ ಬಿಡುಗಡೆ ಮಾಡಿದರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ರವಿವರ್ಮ ಪೇಂಟರ್ಸ್ ಸಂಘದ ಅಧ್ಯಕ್ಷ ಅಡಿವೆಪ್ಪ ಎಸ್.ಚಲವಾದಿ ವಹಿಸಿದ್ದರು. ಶಿವಯೋಗಿ ಪಟ್ಟಣಶೆಟ್ಟಿ, ಜಂದಿಸಾಬ ಢಾಲಾಯತ, ಚನ್ನವೀರಗೌಡ ಕೆ.ಪಾಟೀಲ, ಚಾಂದಸಾಬ ಅಬ್ಬಿಗೇರಿ, ಶೇಖಪ್ಪ ಕರಿಬಿಷ್ಠಿ, ಮೈನುದ್ದೀನ ಆದಮಭೈ, ಅಲ್ತಾಫ ಕೊಪ್ಪಳ, ಕೆ.ಬಿ. ಕುಡಗುಂಟಿ, ನೂರಅಹ್ಮದ ಬಳ್ಳಾರಿ, ಬಿ.ಎಸ್. ಹಳ್ಳಿಕೇರಿ, ಪರಶುರಾಮ ಆರ್.ಸಿಂಧೆ, ಕಾರ್ಮಿಕ ಇಲಾಖೆಯ ಅಧಿಕಾರಿಗಳಾದ ಸುಷ್ಮಾ ಸೇರಿದಂತೆ ಗದಗ ಜಿಲ್ಲಾ ರವಿವರ್ಮ ಪೇಂಟರ್ಸ್ ಸಂಘದ ಸರ್ವ ಪದಾಧಿಕಾರಿಗಳು, ಸದಸ್ಯರು, ಮತ್ತು ಸಮಸ್ತ ಕಟ್ಟಡ ನಿರ್ಮಾಣ ಕಾರ್ಮಿಕರು ಉಪಸ್ಥಿತರಿದ್ದರು.

### ಗ್ರಾಮೀಣ ವಲಯದ ಕ್ರೀಡಾಕೂಟದಲ್ಲಿ ರವಿ ಎಲ್.ಗುಂಜಿಕರ ಅಭಿಮತ

# ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಮುಖ್ಯವೇ ಹೊರತು ಸೋಲು-ಗೆಲುವು ಅಲ್ಲ. ಸೋಲು-ಗೆಲುವು ಎರಡನ್ನೂ ಸಮನಾಗಿ ಸ್ವೀಕರಿಸಿ ಎಂದು ಕರ್ನಾಟಕ ರಾಜ್ಯ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ, ಜಿಲ್ಲಾ ಅಧ್ಯಕ್ಷರಾದ ರವಿ ಎಲ್.ಗುಂಜಿಕರ ಹೇಳಿದರು.

ಅವರು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ ಗದಗ, ತಾಲೂಪಂಚಾಯತ ಗದಗ, ಶಾಲಾ ಶಿಕ್ಷಣ ಇಲಾಖೆ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ ಗ್ರಾಮೀಣ ವಲಯ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 2024-25ನೇ ಸಾಲಿನ ಗದಗ ಗ್ರಾಮೀಣ ವಲಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತಾಲೂಕು ಮಟ್ಟದ ಕ್ರೀಡಾಕೂಟದ ಕ್ರೀಡಾ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚು ಮಹತ್ವ ನೀಡಬೇಕಾಗಿದೆ. ಗ್ರಾಮೀಣ ಭಾಗದ ಯುವಕರಲ್ಲಿರುವ ಪ್ರತಿಭೆಯನ್ನು ಗುರುತಿಸಿ ನಿರ್ಣಾಯಕರು ಪ್ರೋತ್ಸಾಹ ನೀಡಬೇಕು. ಉದ್ಯೋಗಗಳಲ್ಲಿ ಕ್ರೀಡಾ ಮೀಸಲಾತಿ ನೀಡಲಾಗುತ್ತದೆ. ಅದನ್ನು ಕ್ರೀಡಾಪಟುಗಳು ಸದುಪಯೋಗ ಪಡಿಸಿಕೊಳ್ಳಲು ಮನವಿ ಮಾಡಿದರು.



ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಜಿಲ್ಲಾ ಅಧ್ಯಕ್ಷ ವ್ಹಿ.ಎಂ. ಹಿರೇಮಠ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಎಲ್ಲಾ ಕ್ರೀಡೆಗಳನ್ನು ಆಯೋಜಿಸಲು ಸಕಲ ಸೌಲಭ್ಯಗಳನ್ನು ಹೊಂದಿದೆ. ಇದನ್ನು ಬಳಸಿಕೊಂಡು ನಿರಂತರ ಅಭ್ಯಾಸ ಮಾಡಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸಿ ಜಯಶಾಲಿಗಳಾದ ಮಾತ್ರ ನಿಮ್ಮ ಬದುಕನ್ನು ರೂಪಿಸಿಕೊಳ್ಳಲು ಸಾಧ್ಯ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಕ್ರೀಡಾ ಜ್ಯೋತಿ ಸ್ವೀಕರಿಸಿದ ಕರ್ನಾಟಕ ರಾಜ್ಯ ಪ್ರೌಢಶಾಲಾ ಶಿಕ್ಷಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ ಮಾತನಾಡಿ, ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿಯಾಗಲಿದೆ. ಕ್ರೀಡೆಗಳಲ್ಲಿ ಭಾಗವಹಿಸುವದರಿಂದ ಆರೋಗ್ಯದ ಜೊತೆಗೆ ದೇಹ ಮತ್ತು ಮನಸ್ಸು ಸದೃಢವಾಗಿ ಶಿಕ್ಷಣದಲ್ಲಿ ಉತ್ತಮ ಸಾಧನೆ ಮಾಡಬಹುದು. ಕ್ರೀಡೆಗಳಲ್ಲಿ ಕೌಶಲ್ಯವನ್ನು ಬಳಸಿಕೊಂಡು ಉತ್ತಮ ಕ್ರೀಡಾಪಟುಗಳಾಗಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಜಯಗಳಿಸಿ ಗದಗ ಜಿಲ್ಲೆಯ ಕೀರ್ತಿ ಬೆಳಗಬೇಕೆಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಗದಗ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಬಾವಿಕಟ್ಟಿ, ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ, ಬಿ.ಕೆ. ಕೊಣ್ಣೂರ, ಗದಗ ಕ್ರೀಡಾ ಇಲಾಖೆಯ ಸಹಾಯ ನಿರ್ದೇಶಕ ಶರಣು ಗೊಗೇರಿ, ವಾಸು ಕಲಕಂಬಿ, ರವಿರಾಜ ಪವಾರ, ಎಸ್.ಆರ್. ಬಂಡಿ, ರಾಜು ಚವ್ಹಾಣ, ಎಂ.ಆರ್. ಪೂಜಾರ, ಡಿ.ಎಸ್. ತಳವಾರ, ಎಫ್.ಎಂ. ಮುಶಣ್ಣವರ, ಜೆ.ಬಿ. ಅಣ್ಣಿಗೇರಿ ಮುಂತಾದವರು ಉಪಸ್ಥಿತರಿದ್ದರು.

ಗದಗ ಗ್ರಾಮೀಣ ದೈಹಿಕ ಶಿಕ್ಷಣ ಅಧಿಕಾರಿ ಟಿ.ಎಸ್. ಪವಾರ ಸ್ವಾಗತಿಸಿದರು. ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಾರದಾ ಬಂಡಿ ಪ್ರಾರ್ಥನೆ ಸಲ್ಲಿಸಿದರು. ಎನ್.ವೈ. ಸಂಗೊಂದಿ ಪ್ರತಿಜ್ಞಾ ವಿಧಿ ಬೋಧಿಸಿದರು. ಎಮ್.ಆರ್. ಪಾಟೀಲ ವಂದಿಸಿದರು. ಈ ಸಂದರ್ಭದಲ್ಲಿ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕರನ್ನ ಹಾಗೂ ಎಂಟು ವಲಯಗಳ ಕ್ರೀಡಾಕೂಟ ಆಯೋಜಕರನ್ನ ಸನ್ಮಾನಿಸಲಾಯಿತು. ವಿವಿಧ ಗ್ರಾಮಗಳಿಂದ ಆಗಮಿಸಿದ ಮಕ್ಕಳು ಕ್ರೀಡಾ ಕೂಟದಲ್ಲಿ ಭಾಗವಹಿಸಿದ್ದರು.

## ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಪಟ್ಟಣದ ದಿ ಶಿರಹಟ್ಟಿ ತಾಲೂಕು ಕೋ-ಆಪರೇಟಿವ್ ಕನ್ಸ್ಯೂಮರ್ಸ್ ಹೋಲ್‌ಸೇಲ್ ಸ್ಟೋರ್ಸ್ ಲಿ., (ಜನತಾ ಬಜಾರ) ಶಿರಹಟ್ಟಿ ಇದರ ಆಡಳಿತ ಮಂಡಳಿಗೆ ಶಿರಹಟ್ಟಿಯ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಮಹಾಂತೇಶ ಶಿವಬಸಪ್ಪ ದಶಮನಿ ಇವರನ್ನು ಆಡಳಿತ ಮಂಡಳಿಗೆ ಅಧಿಕಾರೇತರ ಸದಸ್ಯರನ್ನಾಗಿ ಸಹಕಾರ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ-3 ರಂಗನಾಥ ಜಿ. ಅವರು ನಾಮನಿರ್ದೇಶನ ಮಾಡಿ ಆದೇಶಿಸಿದ್ದಾರೆ.

## ಚಿಂತನ ಕಾರ್ಯಕ್ರಮ ಇಂದು



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಜ್ಞಾನ ಸಂವಹನಕಾರರಾದ ರಾಜು ಭೂಶೆಟ್ಟಿಯವರ 'ಸೃಜನಶೀಲತೆ' ಎಂಬ ವಿಷಯದ ಮೇಲಿನ ಚಿಂತನ ಕಾರ್ಯಕ್ರಮವು ಧಾರವಾಡ ಆಕಾಶವಾಣಿಯ ಮೂಲಕ ಸೆ.24ರಂದು ಬೆಳಿಗ್ಗೆ 6.25ಕ್ಕೆ ಪ್ರಸಾರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ತಾಲೂಕಾ ಘಟಕಕ್ಕೆ ನೇಮಕ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಕರ್ನಾಟಕ ಮುಸ್ಲಿಂ ಯೂನಿಟಿಯ ಶಿರಹಟ್ಟಿ ತಾಲೂಕಾ ಘಟಕದ ಅಧ್ಯಕ್ಷರನ್ನಾಗಿ ರಿಯಾಜ ತಹಸೀಲ್ದಾರ ಇವರನ್ನು ಗದಗ ಜಿಲ್ಲಾಧ್ಯಕ್ಷ ಸಯ್ಯದ್‌ಖಾಲಿದ್ ಕೊಪ್ಪಳ ನೇಮಕ ಮಾಡಿದ್ದಾರೆ. ಸಂಘಟನೆಯ ಧ್ಯೇಯ, ಉದ್ದೇಶಗಳಿಗೆ ಬದ್ಧರಾಗಿ ಸಂಘದ ಕಾರ್ಯ ನಡಾವಳಿಗಳಿಗೆ ಚ್ಯುತಿ ಬಾರದಂತೆ ಸಕ್ರಿಯವಾಗಿ ಸಂಘಟನಾ ಕಾರ್ಯದಲ್ಲಿ ತೊಡಗಿಸಿಕೊಳ್ಳಲು ಆದೇಶ ನೀಡಿದ್ದಾರೆ.

# ಬಾಲಕಿಯರ ಕಬಡ್ಡಿಯಲ್ಲಿ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಈಚೆಗೆ ನಡೆದ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಬಾಲಕಿಯರ ಕಬಡ್ಡಿ ವಿಭಾಗದಲ್ಲಿ ಹುಯಿಲಗೋಳ ಗ್ರಾಮದ ಸ್ವಾಮಿ ವಿವೇಕಾನಂದ ಸ್ಪೋರ್ಟ್ಸ್ ಕ್ಲಬ್‌ನ ಬಾಲಕಿಯರ ತಂಡವು ಪ್ರಥಮ ಸ್ಥಾನ ಪಡೆದು, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ.

ವಿಜೇತರಾದ ಬಾಲಕಿಯರ ತಂಡಕ್ಕೆ ಹಾಗೂ ತರಬೇತಿದಾರ ವಿನಾಯಕ ಕರಮುಡಿ ಅವರಿಗೆ ಕ್ಲಬ್‌ನ ಅಧ್ಯಕ್ಷ ಬಸವರಾಜ ರೋಣದ, ಉಪಾಧ್ಯಕ್ಷ ಮಿಲಂದ ಕಾಳಿ, ಕಾರ್ಯದರ್ಶಿ ಚಂದ್ರು ಕಂಬಳಿ, ಗ್ರಾ.ಪಂ ಅಧ್ಯಕ್ಷ ಟಿ.ಎಫ್. ನದಾಫ, ಹಿರಿಯ ಆಟಗಾರರಾದ ಎಸ್.ಎನ್. ಸೊರಟೂರ, ಹೇಮಂತ ದಾಸರ, ಪಿ.ಸಿ. ಕಾಳಿ, ರಾಮಣ್ಣ ನೀರಲಗಿ, ಅಶೋಕ್ ಬೆಳಗಟ್ಟಿ, ಫಾರೂಕ್ ಲಕ್ಕುಂಡಿ, ಕಿರಣ ಲಕ್ಕುಂಡಿ ಸೇರಿ ಹುಯಿಲಗೋಳ ಸಮಸ್ತ ಗುರುಹಿರಿಯರು ಹಾಗೂ ಯುವಕರು ಅಭಿನಂದಿಸಿದ್ದಾರೆ. ಸೆ.25ರಂದು ದಸರಾ ಕ್ರೀಡಾಕೂಟದ ಜಿಲ್ಲಾಮಟ್ಟದ ಕ್ರೀಡಾಕೂಟ ನಡೆಯಲಿದೆ.

### ನೇಕಾರ ಸಹಕಾರಿ ಸಂಘದ ವಾರ್ಷಿಕ ಮಹಾ ಸಭೆಯಲ್ಲಿ ಅಂದಪ್ಪ ತಿಮ್ಮಾಪೂರ

# ಶತಮಾನೋತ್ಸವ ಸ್ಮಾರಕ ಭವನ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಬ್ರಿಟಿಷರ ಆಡಳಿತದ ಕಾಲದಲ್ಲಿಯೇ ಸ್ಥಾಪನೆಯಾದ ಲಕ್ಕುಂಡಿ ನೇಕಾರ ಸಹಕಾರ ಉತ್ಪಾದಕರ ಸಂಘವು ಯಶಸ್ವಿಯಾಗಿ ಶತಮಾನೋತ್ಸವ ಪೂರೈಸಿದ್ದು, ಮುಂದಿನ ವರ್ಷ ಶತಮಾನೋತ್ಸವ ಸ್ಮಾರಕ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಸಂಘದ ಅಧ್ಯಕ್ಷ ಅಂದಪ್ಪ ತಿಮ್ಮಾಪೂರ ಹೇಳಿದರು.

ಇಲ್ಲಿಯ ಲಕ್ಕುಂಡಿ ನೇಕಾರ ಸಹಕಾರ ಉತ್ಪಾದಕರ ಸಂಘದ 108ನೇ ವಾರ್ಷಿಕ ಮಹಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 1965ರಲ್ಲಿ ಹಳೆಯ ಧಾರವಾಡ ಜಿಲ್ಲೆಯಲ್ಲಿ ಸಂಘಕ್ಕೆ ಉತ್ತಮ ಪ್ರಶಸ್ತಿ ದೊರಕಿದ್ದು ಅಂದು



ಸಂಘದಿಂದ 2500 ಜನ ನೇಕಾರರಿಗೆ ಉದ್ಯೋಗವನ್ನು ನೀಡಿತ್ತು. ಕಳೆದ 23 ವರ್ಷದ ನನ್ನ ಅಧಿಕಾರವಧಿಯಲ್ಲಿ ಪ್ರಸ್ತುತ 4.56 ಲಕ್ಷ ರೂ ಸಂಘದ ಖಾತೆಯಲ್ಲಿರುವುದು ಸಂತಸದ ವಿಷಯವಾಗಿದೆ ಎಂದರು.

ಸಂಘದ ಉಪಾಧ್ಯಕ್ಷ ಬಿ.ಎಚ್. ಹುಬ್ಬಳ್ಳಿ ಮಾತನಾಡಿ, ಗದಗ ತೋಂಟದಾರ್ಯ ಮಠದ ಶ್ರೀಗಳು ಈ ಸಂಘದ ಕಾರ್ಯಚಟುವಟಿಕೆಯನ್ನು ಮನಗಂಡು ಗ್ರಾಮದಲ್ಲಿರುವ ಶ್ರೀ ಮಠದ ಅಮೂಲ್ಯವಾದ ಆಸ್ತಿಗಳನ್ನು ಸಂಘಕ್ಕೆ ಕೊಡುಗೆ ನೀಡಿದ್ದರಿಂದ ಸಂಘವು ಉತ್ತಮ ಕಟ್ಟಡದೊಂದಿಗೆ ಯಶಸ್ವಿಯಾಗಿ ಮುನ್ನಡೆದಿದೆ. ರೇಷನ್ ವಿತರಣೆಯಿಂದಲೇ ಸಂಘವು ನಡೆದುಕೊಂಡು ಬರುತ್ತಿದ್ದು, ಪ್ರತಿ ತಿಂಗಳು ಫಲಾನುಭವಿಗಳು ತಪ್ಪದೇ ರೇಷನ್ ಪಡೆಯಬೇಕು ಎಂದು ವಿನಂತಿಸಿಕೊಂಡರು.

ಜೆ.ಡಿ. ಯರಗುಡಿ ಮಾತನಾಡಿ, 108 ವರ್ಷ ಪೂರೈಸಿರುವ ಸಂಘವು ಈ ಭಾಗದಲ್ಲಿಯೇ ಜನ ಮನ್ನಣೆ ಪಡೆದಿದೆ. ಬಡವರ ಪರ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಸಂಘವು ಸರಕಾರ ನೀಡುವ ರೇಷನ್‌ನ್ನು ಪ್ರಾಮಾಣಿಕವಾಗಿ ಜನರಿಗೆ ತಲುಪಿಸುವಲ್ಲಿ ಯಶಸ್ವಿಯಾಗಿದೆ ಎಂದರು.

ಕಾರ್ಯದರ್ಶಿ ವಿ.ಎಸ್. ತಿಮ್ಮಾಪೂರ ವಾರ್ಷಿಕ ಲೆಕ್ಕವನ್ನು ವಿವರಿಸಿದರು. ಸಂಗಮೇಶ ತಿಮ್ಮಾಪೂರ, ಕುರುಹಿನಶೆಟ್ಟಿ ಸಮಾಜದ ಅಧ್ಯಕ್ಷ ಮಂಜುನಾಥ ತಡಹಾಳ ಮಾತನಾಡಿದರು.

ಅಬ್ದುಲ್‌ರೂಪಸಾಬ ಯರಗುಡಿ, ಚನ್ನಪ್ಪ ಹಿರೇಹಾಳ, ಅಬ್ದುಲ್ ಮುನಾಫ್‌ಸಾಬ ಯರಗುಡಿ, ಪರಪ್ಪ ಗೊಂಡಬಾಳ, ಈಶಪ್ಪ ತಿಮ್ಮಾಪೂರ, ಭಕ್ಷಿಸಾಬ ಗದಗ, ಶಕುಂತಲಾ ಹೊನ್ನಾಲ, ಲಲಿತಾ ಜಕ್ಕಲಿ ಉಪಸ್ಥಿತರಿದ್ದರು. ಮಂಜುನಾಥ ಗದಗಿನ ನಿರೂಪಿಸಿ ವಂದಿಸಿದರು.



ಪ್ರಧಾನಮಂತ್ರಿ ಕ್ಷಯಮುಕ್ತ ಭಾರತ ಅಭಿಯಾನ ಯೋಜನೆಯಡಿ ಗದುಗಿನ ರೆಹಮತ ನಗರದ ಕ್ಷಯರೋಗಿಗಳಿಗೆ ಪೌಷ್ಠಿಕಾಂಶವುಳ್ಳ ಆಹಾರದ ಕಿಟ್‌ನ್ನು ವಿತರಿಸಲಾಯಿತು. ಈ ಸಂಧರ್ಭದಲ್ಲಿ ಡಾ. ಚಿನ್ನಪ್ಪಗೌಡ್ರ, ಗಣೇಶ ಭಾಗಡೆ, ಪ್ರಕಾಶ ಅಂಗಡಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

### ಶಿವಸಂಗಮ ಸೌಹಾರ್ದ ಸಹಕಾರಿ ಸಂಘದ ವಾರ್ಷಿಕ ಸಭೆ

# ಸಾಧನೆಗೈದ ಸಾಧಕರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಉಷಾದೇವಿ ಗೋವಿಂದರಾಜ ಕುಷ್ಟಗಿ ರೋಟರಿ ಕಮ್ಯೂನಿಟಿ ಕೇರ್‌ಸೆಟಿರ್‌ನಲ್ಲಿ ಏರ್ಪಡಿಸಿದ್ದ ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘದ 10ನೇ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕ ಮಹನೀಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಿವೃತ್ತ ಜಿಲ್ಲಾ ನ್ಯಾಯಾಧೀಶ ಎಸ್.ಜಿ. ಪಲ್ಲೇದ, ನಿವೃತ್ತ ಸಹಕಾರ ಸಂಘಗಳ ಸಹಾಯಕ ನಿಬಂಧಕ ಸತ್ಯನಗೌಡ ಪಾಟೀಲ, ಲೆಕ್ಕಪರಿಶೋಧಕರಾದ ಪರ್ವತಗೌಡ್ರ ಚೆಟ್ಟಿ, ಶ್ರೇಷ್ಠ ವರ್ತಕ ಬಲವಂತ ಪಾಟೀಲ, ಗೋವಿಂದರಾಜ ಗುಡಿಸಾಗರ, ನಿವೃತ್ತ ಪ್ರಾಚಾರ್ಯ ಡಾ.ಉಮೇಶ ಪುರದ, ಸುಲೋಚನಾ ನಂದಿ, ಸಮಾಜ ಸೇವಕ ಅಶೋಕ ಮಜ್ಜಿಗುಡ್ಡ, ಉತ್ತಮ ಗ್ರಾಹಕ ಬಾಳಪ್ಪ ಕವಲೂರ, ಬಸಪ್ಪ ವನಗೇರಿ, ಪ್ರಕಾಶಕರಾದ ಪ್ರಸನ್ ಶಾಬಾದಿಮಠ, ಉತ್ತಮ ಕೃಷಿಕ ಹೇಮಣ್ಣ ಬೇಲೇರಿ, ರಾಜ್ಯ ಮಟ್ಟದ ಉತ್ತಮ ಶಿಕ್ಷಕಿ ರತ್ನಾ ಬದಿ, ಜಿಲ್ಲಾ ಉತ್ತಮ ಶಿಕ್ಷಕಿ ಮಹಾಂತವ್ವ ಹಿರೇಮಠ, ಕುಸ್ತಿಯಲ್ಲಿ ಚಿನ್ನದ ಪದಕ ಪಡೆದ ಕುಸ್ತಿಪಟು ರಮೇಶ ಭಾವಿ, ಶೂಟಿಂಗ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಪಡೆದ ಸಿದ್ಧಾರ್ಥ ಬಡ್ನಿ, ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸ್ಫೂರ್ತಿ ಪಾಟೀಲ, ಸುವಿಧಾ ಪಲ್ಲೇದ, ಅರುಣಕುಮಾರ ಗೋಪಾನವರ, ಸಂಗೀತ ಸಾಧಕಿ ಸಂಗೀತಾ ಭರಮಗೌಡರ, ಡ್ರಾಮಾ ಜ್ಯೂನಿಯರ್ ವಿಶ್ವ ಲಕ್ಕುಂಡಿ ಸೇರಿದಂತೆ ಹಲವು ಸಾಧಕ ಮಹನೀಯರನ್ನು ಸನ್ಮಾನಿಸಿ ಗೌರವಿಸಲಾಯಿತು.



ಈ ಸಂದರ್ಭದಲ್ಲಿ ಸಂಘದ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಮಾತನಾಡಿ, ಈ ಸಾಧಕ ಮಹನೀಯರು ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಇವರ ಸಾಧನೆ ಇತರರಿಗೆ ಮಾದರಿಯಾಗಿದ್ದು, ಇಂತಹ ಸಾಧಕರನ್ನು ಗುರುತಿಸಿ ಸನ್ಮಾನಿಸುವದು ನಮ್ಮ ಸಂಸ್ಥೆಗೆ ಹೆಮ್ಮೆ ಎನ್ನಿಸಿದೆ ಎಂದರು.

ವೇದಿಕೆಯ ಮೇಲೆ ಲೆಕ್ಕಪರಿಶೋಧಕರಾದ ಕೆ.ಎಸ್. ಚಟ್ಟಿ, ನಿರ್ದೇಶಕರಾದ ಮಹೇಶ ಗಾಣಿಗೇರ, ಎಮ್.ಬಿ. ಲಿಂಗದಾಳ, ಪ್ರಶಾಂತ ದೇಸಾಯಿಮಠ, ಗಿರಿಯಪ್ಪ ಗಾಣಿಗೇರ, ಕಳಕಪ್ಪ ನಾಗರಾಳ, ಸುರೇಶ ಸರ್ವಿ, ಗೀತಾ ಪಲ್ಲೇದ, ಸರೋಜಾ ಲಿಂಗದಾಳ, ಶೋಭಾ ಶಿವಕಾಳಿಮಠ, ಕವಿತಾ ದೇಸಾಯಿಮಠ ಉಪಸ್ಥಿತರಿದ್ದರು.

ಸಂಘದ ಅಧ್ಯಕ್ಷ ವ್ಹಿ.ಎಸ್. ಶಿವಕಾಳಿಮಠ ಮಾತನಾಡಿ, ಸಂಸ್ಥೆ ಕೇವಲ ವ್ಯವಹಾರ, ಲಾಭ-ಹಾನಿಯನ್ನು ಮಾತ್ರ ಲೆಕ್ಕಾಚಾರ ಹಾಕುವದಿಲ್ಲ. ಅದರೊಟ್ಟಿಗೆ ಸಮಾಜಮುಖಿ, ಜನಮುಖಿ, ಸಾಮಾಜಿಕ ಕಾರ್ಯಗಳನ್ನು ಮಾಡುತ್ತಿದೆ ಎಂದರು.

ಗಾಯಕಿ ಸಂಗೀತಾ ಭರಮಗೌಡ್ರ ಪ್ರಾರ್ಥಿಸಿದರು. ಬಿ.ಎಮ್. ಹಳ್ಳಿಕೇರಿ ಸ್ವಾಗತಿಸಿದರು. ಟಿ.ವ್ಹಿ. ಸಂಶಿ, ಜಗದೀಶ ಹುಡೇದ, ಎಸ್.ಎಂ. ಸರ್ವಿ, ಬಸವರಾಜ ಹಳ್ಳಿಕೇರಿ ನಿರೂಪಿಸಿದರು. ಮಲ್ಲು ಬಡಿಗೇರ ವಂದಿಸಿದರು.

## ನಿಧನ ವಾರ್ತೆ

### ಅಂದಯ್ಯ ರೇವಣಕಿಮಠ



ನರೇಗಲ್: ಪಟ್ಟಣದ 3ನೇ ವಾರ್ಡಿನ ಜಕ್ಕಲಿ ರಸ್ತೆಯ ಆಶ್ರಯ ಕಾಲೋನಿ ನಿವಾಸಿ ಅಂದಯ್ಯ ರಾಚಯ್ಯ ರೇವಣಕಿಮಠ (65) ಇತ್ತೀಚೆಗೆ ನಿಧನರಾದರು. ಇವರಿಗೆ ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವಿದೆ.

### ಚಿನ್ನವ್ವ ಚಲವಾದಿ



ಮಲ್ಲಸಮುದ್ರ ಗ್ರಾಮದ ಶ್ರೀಮತಿ ಚಿನ್ನವ್ವ ಯಲ್ಲಪ್ಪ ಚಲವಾದಿ (43) ಶನಿವಾರ 21-09-2024 ರಂದು ನಿಧನರಾದರು.

ಮೃತರು ಸಹೋದರ, ಸಹೋದರಿಯರು, ಮಾವಂದಿರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳನ್ನು ಅಗಲಿದ್ದಾರೆ.

## ದಾಖಲಾತಿ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಡಿ.ಇ.ಎಲ್ .ಇಡಿ/ಡಿ.ಪಿ.ಇಡಿ/ಡಿ.ಪಿ.ಎಸ್.ಇ. ಕೋರ್ಸಿನ ಸರಕಾರಿ ಕೋಟಾದ ಉಳಿಕೆ ಸೀಟುಗಳನ್ನು ಆಡಳಿತ ಮಂಡಳಿಯವರು ದಾಖಲಾತಿ ಮಾಡಿಕೊಳ್ಳಲು ಅಕ್ಟೋಬರ್ 04 ಕೊನೆಯ ದಿನಾಂಕವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ವೆಬ್ ಸೈಟ್ ನಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ. 30ರಂದು ಅಂಚೆ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ಅಂಚೆ ಸೇವೆಗೆ ಸಂಬಂಧಿಸಿದಂತೆ ಸೆಪ್ಟೆಂಬರ್ 30ರಂದು ಬೆಳಗ್ಗೆ 11.00 ಗಂಟೆಗೆ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ವಿಭಾಗೀಯ ಮಟ್ಟದ ಅಂಚೆ ಅದಾಲತ್ ನಡೆಯಲಿದೆ.

ಅಂಚೆ ಸೇವೆಗೆ ಸಂಬಂಧಪಟ್ಟ ದೂರು, ಸಲಹೆ, ಸೂಚನೆಗಳಿದ್ದರೆ ಸೆಪ್ಟೆಂಬರ್ 28ರ ಒಳಗಾಗಿ ನಗರದ ಎಪಿಎಂಸಿ ಯಾರ್ಡ್‌ನಲ್ಲಿರುವ ಅಂಚೆ ಅಧೀಕ್ಷಕರ ಕಚೇರಿಯ ವಿಳಾಸಕ್ಕೆ ಲಕೋಟೆಯಲ್ಲಿ (ಅಂಚೆ ಚೀಟಿಯನ್ನು ಲಗತ್ತಿಸದೆ) ದೂರು, ಸಲಹೆ, ಸೂಚನೆಗಳನ್ನು ಸಲ್ಲಿಸಬಹುದು, ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08372-277823 ಗೆ ಸಂಪರ್ಕಿಸಬಹುದು ಎಂದು ಗದಗ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾವು ಕಚ್ಚಿ ವೃದ್ಧೆ ಸಾವು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಗುಲಗಂಜಿಕೊಪ್ಪ ಗ್ರಾಮದ ಮಹಿಳೆ ನೀಲವ್ವ ಬಸಪ್ಪ ದಂಡಿನ (64) ಅವರು ರವಿವಾರ ಜಮೀನಿನಲ್ಲಿ ಕೆಲಸ ಮಾಡುವ ವೇಳೆ ಹಾವು ಕಚ್ಚಿ ಸಾವನಪ್ಪಿರುವ ಘಟನೆ ನಡೆದಿದೆ.

ಗುಲಗಂಜಿಕೊಪ್ಪ ಗ್ರಾಮದ ನೀಲವ್ವ ದಂಡಿನ ರವಿವಾರ ಜಮೀನಿನಲ್ಲಿ ಹುಲ್ಲು ಕೀಳುವಾಗ ವಿಷಕಾರಿ ಹಾವು ಕಚ್ಚಿದ್ದು, ಕೂಡಲೇ ಪಟ್ಟಣದ ಸರಕಾರಿ ಆಸ್ಪತ್ರೆಗೆ ಸೇರಿಸಿದರೂ ಸಹ ಪ್ರಯೋಜನವಾಗದೆ ಸಾವನಪ್ಪಿದ್ದಾಳೆ. ಈ ಕುರಿತು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

## ಕರಾಟೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಗದಗ, ಕೆ.ಎಚ್. ಪಾಟೀಲ ಸೆಂಟರ್ ಫಾರ್ ಹ್ಯೂಮನ್ ಎಕ್ಸಲೆನ್ಸ್, ಸ್ವಾಮಿ ವಿವೇಕಾನಂದ ಪಿಯು ವಿಜ್ಞಾನ ಕಾಲೇಜು ಹುಲಕೋಟಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ನಗರದ ಮನೋರಮಾ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿ ಕಿರಣಕುಮಾರ ಕೊಟ್ಟೂರಶೆಟ್ಟರ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಯ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಶಾಹಿದಾ ಶಿರಹಟ್ಟಿ, ಬಿಸಿಎ ವಿಭಾಗದ ಸಂಯೋಜಕರಾದ ಸವಿತಾ ಪೂಜಾರ, ಬಿಕಾಂ ವಿಬಾಗದ ಸಂಯೋಜಕರಾದ ಅಲ್ವಿನಾ ಡಿ, ಬಿಬಿಎ ವಿಭಾಗದ ಸಂಯೋಜಕರಾದ ಚೈತ್ರಾ ಡಿ, ದೈಹಿಕ ನಿರ್ದೇಶಕರಾದ ಖಯುಮ ಎಂ.ನವಲೂರ, ಆಫೀಸ್ ಸುಪರಿಡೆಂಡೆಂಟ್ ಉಮಾ ದಿನ್ನಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.


### ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೇಡ್ಲೇರಿ

## ಪೌರ ಕಾರ್ಮಿಕರನ್ನು ಗೌರವದಿಂದ ಕಾಣಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪೌರ ಕಾರ್ಮಿಕರು ತಮ್ಮ ಆರೋಗ್ಯವನ್ನೂ ಲೆಕ್ಕಿಸದೇ ರಾಜ್ಯದ ನಗರ ಪಟ್ಟಣಗಳನ್ನು ಸ್ವಚ್ಛ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಹಗಲಿರುಳು ಶ್ರಮಿಸುವ ಸೇನಾನಿಗಳಾಗಿದ್ದಾರೆ. ಸಮಾಜ ಇವರನ್ನು ಗೌರವದಿಂದ ಕಾಣಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕಾ ಅಧ್ಯಕ್ಷ ಈಶ್ವರ ಮೇಡ್ಲೇರಿ ಹೇಳಿದರು.

ಅವರು ಸೋಮವಾರ ಪುರಸಭೆ ಆವರಣದಲ್ಲಿ 13ನೇ ವರ್ಷದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ, ಸ್ಥಳೀಯ ಸಂಸ್ಥೆಗಳ ಆಧಾರ ಸ್ತಂಭಗಳಾಗಿರುವ ಪೌರಕಾರ್ಮಿಕರು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ತಮ್ಮನ್ನೇ ತಾವು ಸಮರ್ಪಿಸಿಕೊಂಡಿರುತ್ತಾರೆ. ಕೊರೋನಾ ಮಹಾಮಾರಿ ಆವರಿಸಿರುವ ಸಂಕಷ್ಟದ ಕಾಲದಲ್ಲಿಯೂ ಭೀತಿಗೊಳ್ಳದೇ ಸೇನಾನಿಗಳಂತೆ ಕಾರ್ಯ ನಿರ್ವಹಿಸಿದ್ದಾರೆ. ಈ ನಿಟ್ಟಿನಲ್ಲಿ ಪೌರಕಾರ್ಮಿಕರ ಸೇವೆ ಅನನ್ಯವಾಗಿದ್ದು, ಊರಿನ ಸ್ವಚ್ಛತೆ ಪರಿಸರ ರಕ್ಷಣೆಗೆ ಅವರ ಪಾತ್ರ ಹೆಚ್ಚು ಮಹತ್ವದ್ದಾಗಿದೆ.



ಅವರನ್ನು ಸಮಾಜ ಗೌರವದಿಂದ ಕಾಣಬೇಕು. ಕಸ ಸಂಗ್ರಹಕ್ಕೆ ಬಂದ ಕಾರ್ಮಿಕರು ನಮ್ಮ ಮನೆಗಳ ಕಸವನ್ನು ಸ್ವಚ್ಛ ಮಾಡುವವರು ಎನ್ನುವ ಭಾವನೆ ಇರಲಿ. ಪೌರಕಾರ್ಮಿಕ ದಿನಾಚರಣೆಯಂದು ಮಾತ್ರ ಅವರನ್ನು ಗೌರವಿಸದೆ ನಿತ್ಯ ಅವರ ಬಗ್ಗೆ ಸಮಾಜ ಉತ್ತಮ ಭಾವನೆ ವ್ಯಕ್ತಪಡಿಸಿ ಅವರನ್ನು ಗೌರವದಿಂದ ಕಾಣಬೇಕು ಎಂದು ಹೇಳಿದರು.

ಪುರಸಭೆ ಉಪಾಧ್ಯಕ್ಷ ಪೀರದೋಷ ಆಡೂರ, ಸದಸ್ಯರಾದ ಪೂರ್ಣಿಮಾ ಪಾಟೀಲ, ರಾಜಣ್ಣ ಕುಂಬಿ, ಅಶ್ವಿನಿ ಅಂಕಲಕೋಟಿ, ಮಹೇಶ ಹೊಗೆಸೊಪ್ಪಿನ, ಪ್ರವೀಣ ಬಾಳಿಕಾಯಿ, ಮಾತನಾಡಿ, ಸ್ವಚ್ಛ ಪಟ್ಟಣ, ನಗರ ಮತ್ತು ಭಾರತ ನಿರ್ಮಿಸುವಲ್ಲಿ ಪೌರ ಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರನ್ನು ಎಲ್ಲ ಕಡೆ ಕೆಲಸಕ್ಕಾಗಿ ಬಳಸಿಕೊಳ್ಳುತ್ತಿದ್ದು, ಸೌಜನ್ಯಕ್ಕಾದರೂ ಕಾರ್ಯಕ್ರಮಗಳಲ್ಲಿ ಹೂ ನೀಡುವ ಮೂಲಕ ಗೌರವಿಸುವ ಕಾರ್ಯವಾಗಲಿ ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಪೌರಕಾರ್ಮಿಕರೆಲ್ಲರಿಗೂ ಸನ್ಮಾನಿಸಿ ಸರಕಾರದಿಂದ ಕೊಡಮಾಡಿದ ಚೆಕ್‌ಗಳನ್ನು ವಿತರಿಸಲಾಯಿತು.

ಸಭೆಯಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ,

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ಪಟ್ಟಣದ ಜನಸಂಖ್ಯೆಗನುಗುಣವಾಗಿ ಪೌರಕಾರ್ಮಿಕರ ಅವಶ್ಯಕತೆ ಇದೆ. ಆದರೆ ನಮ್ಮಲ್ಲಿ ಸಿಬ್ಬಂದಿಗಳ ಕೊರತೆ ಕಾಡುತ್ತಿದೆ. 23 ವಾರ್ಡ್‌ಗಳಲ್ಲಿ 8500ಕ್ಕೂ ಅಧಿಕ ಮನೆಗಳಿರುವ ಈ ಪಟ್ಟಣದಲ್ಲಿ ಸುಮಾರು 56 ಪೌರಕಾರ್ಮಿಕರ ಅವಶ್ಯಕತೆ ಇದ್ದು, ಇದೀಗ ನಮ್ಮಲ್ಲಿ ಕೇವಲ 7 ಜನ ಸಿಬ್ಬಂದಿಗಳಿದ್ದಾರೆ. ಈ ಕುರಿತಂತೆ ಆಡಳಿತಮಂಡಳಿ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಿದ್ದಾರೆ ಎಂದು ಹೇಳಿದರು.

ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ, ಪುರಸಭೆ ಸದಸ್ಯರಾದ ರಾಮಣ್ಣ ಗಡದವರ, ಜಯಕ್ಕ ಅಂದಲಗಿ, ಮುಸ್ತಾಕ್‌ಅಹ್ಮದ ಶಿರಹಟ್ಟಿ, ಮಂಜುಳಾ ನಂದೆಣ್ಣವರ, ವಾಣಿ ಹತ್ತಿ, ಮಂಜುಳಾ ಗುಂಜಳ, ಎಸ್.ಕೆ. ಹವಾಲ್ದಾರ, ವಿಜಯ ಕರಡಿ, ವ್ಯವಸ್ಥಾಪಕಿ ಮಂಜುಳಾ ಹೊಗಾರ, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಶಿವಾನಂದ ಅಜ್ಜಣ್ಣವರ, ಹನುಮಂತ ನಂದೆಣ್ಣವರ, ಹಾಗೂ ಪೌರಕಾರ್ಮಿಕರು ಹಾಜರಿದ್ದರು.


### ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಆದರಹಳ್ಳಿ ಕುಮಾರ ಮಹಾರಾಜರಿಂದ ಪ್ರತಿಭಟನೆ

## ಸಮಾಜ ಘಾತುಕರ ವಿರುದ್ಧ ಹೋರಾಟ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಆದರಹಳ್ಳಿ ಗ್ರಾಮದಲ್ಲಿ ಕಳೆದ 2-3 ದಿನಗಳ ಹಿಂದೆ ಸಣ್ಣ ವಿಷಯಕ್ಕೆ ಬೋವಿ ಮತ್ತು ಲಂಬಾಣಿ ಸಮಾಜದ ಯುವಕರ ನಡುವೆ ನಡೆದ ಗಲಾಟೆಗೆ ಸಂಬಂಧಿಸಿದಂತೆ ಆದರಹಳ್ಳಿ ಗವಿಸಿದ್ದೇಶ್ವರ ಮಠದ ಕುಮಾರ ಮಹಾರಾಜರಿಗೆ ಜೀವ ಬೆದರಿಕೆ ಹಾಕಿರುವ ಮತ್ತು ಸಮಾಜದ ಯುವಕರ ಮೇಲೆ ಹಲ್ಲೆ ಮಾಡಿದ ವ್ಯಕ್ತಿಯನ್ನು ಬಂಧಿಸುವಂತೆ ಆಗ್ರಹಿಸಿ ಕುಮಾರ ಮಹಾರಾಜರು ನೂರಾರು ಭಕ್ತರೊಂದಿಗೆ ರವಿವಾರ ಮುಂಜಾನೆಯಿಂದಲೇ ಆದರಹಳ್ಳಿ ಗ್ರಾಮದಲ್ಲಿ ನಡುರಸ್ತೆಯಲ್ಲಿ ಕುಳಿತು ಪ್ರತಿಭಟನೆ ನಡೆಸಿದರು.

ಈ ಸಮಯದಲ್ಲಿ ಶ್ರೀಗಳು ಮಾತನಾಡಿ, ಆದರಹಳ್ಳಿ ಗ್ರಾಮದಲ್ಲಿ ಭೋವಿ, ಲಂಬಾಣಿ, ಮುಸ್ಲಿಂ ಸೇರಿದಂತೆ ಎಲ್ಲ ಸಮಾಜಗಳ ಬಾಂಧವರು ಹೊಂದಾಣಿಕೆಯಿಂದ ಇದ್ದಾರೆ. ಮೊನ್ನೆ ನಡೆದ ಘಟನೆಗೆ ಸಂಬಂಧಿಸಿದಂತೆ ಲಂಬಾಣಿ ಸಮಾಜದ ಯುವಕರ ಮೇಲೆ ಭೋವಿ ಸಮಾಜದ ಯುವಕರು ಹಲ್ಲೆ ಮಾಡಿದ್ದು, ಈ ವೇಳೆ ವೃದ್ಧರು, ಮಹಿಳೆಯರ ಮೇಲೆ ಹಲ್ಲೆ ನಡೆದಿದೆ. ಈ ಸಂದರ್ಭದಲ್ಲಿ ತಾವು ಬೇರೆ ಊರಲ್ಲಿ ಇದ್ದರೂ ಸಹ ನನಗೆ ಭೋವಿ ಸಮಾಜದ ಕೆಲ ಮುಖಂಡರು ಫೋನ್ ಕರೆ



ಮಾಡಿ ಜೀವ ಬೆದರಿಕೆ ಒಡ್ಡುತ್ತಿದ್ದು, ಈ ಗಲಾಟೆಯ ವಿಷಯದಲ್ಲಿ ಮಧ್ಯೆ ಬರದಂತೆ ತಾಕೀತು ಮಾಡಿ ಬೆದರಿಸುತ್ತಿದ್ದಾರೆ.

ಈ ವಿಷಯದಲ್ಲಿ ನಾವು ಬೋವಿ ಸಮಾಜದ ವಿರುದ್ಧ ಹೋರಾಟ ಮಾಡುತ್ತಿಲ್ಲ. ಸಮಾಜದೊಳಗೆ ಇರುವ ಕೆಲ ವ್ಯಕ್ತಿಗಳು ಸಮಾಜಕ್ಕೆ ಚ್ಯುತಿ ತರುವಂತಹ ಕಾರ್ಯವನ್ನು ಮಾಡುತ್ತಿದ್ದು, ಅಂತವರ ವಿರುದ್ಧ ನಮ್ಮ ಹೋರಾಟ ನಡೆಯುತ್ತದೆ ಎಂದರು.

ಗೋರ ಸೇನಾ ರಾಜ್ಯಾಧ್ಯಕ್ಷ, ಬಂಜಾರ ಕಲ್ಯಾಣ ಸಂಘದ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ ಹಾಗೂ ಕಾರ್ಯದರ್ಶಿ ಚಂದ್ರಕಾಂತ ಚವ್ಹಾಣ ಮಾತನಾಡಿ, ಶ್ರೀಮಠದ ಪೂಜ್ಯರು ಎಲ್ಲ ಸಮಾಜಗಳೊಂದಿಗೆ ಹೊಂದಿಕೊಂಡು ಹೋಗುವ ಸ್ವಭಾವದವರಾಗಿದ್ದಾರೆ. ಅವರ ಸೌಮ್ಯ ಸ್ವಭಾವವನ್ನು ದುರುಪ'ಯೋಗಪಡಿಸಿಕೊಳ್ಳುತ್ತಿರುವದು ಸಲ್ಲದು. ಇಂತಹ ಘಟನೆಗಳಿಂದ ಊರಿನ ವಾತಾವರಣ ಹದಗೆಡುವಂತಾಗುತ್ತದೆ. ದಬ್ಬಾಳಿಕೆ, ಧಮಕಿ ನೀಡುವಂತ ವ್ಯಕ್ತಿಗಳ ಮೇಲೆ ಕ್ರಮವಾಗಬೇಕು, ಇಂತಹ ಘಟನೆಗಳು ಮರುಕಳಿಸಬಾರದು. ಪೊಲೀಸರು ಇದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಶಂಕರಗೌಡ ಪಾಟೀಲ್, ಮಹಾಂತಗೌಡ ಪಾಟೀಲ್, ಮಂಜಪ್ಪ ಸುಣಗಾರ, ಪರಶುರಾಮ ನಾಯಕ, ಶೇಖಪ್ಪ ಲಮಾಣಿ, ನಾಗೇಶ ಲಮಾಣಿ, ಶೇಖಪ್ಪ ನಾಯಕ, ನರಸಪ್ಪ ಡಾವ, ಲಕ್ಷ್ಮಣ ನಾಯಕ, ಕಾಶಪ್ಪ ಲಮಾಣಿ, ಶಾರವ್ವ ಲಮಾಣಿ, ಲಕ್ಷ್ಮವ್ವ ಲಮಾಣಿ, ಪ್ರೇಮಾ ಲಮಾಣಿ, ಬಾವವ್ವ ಲಮಾಣಿ, ಸಮಸ್ತ ಡಾವ ಕಾರಬಾರಿ ನಾಯಕ, ಗುರು-ಹಿರಿಯರು ಇದ್ದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ರಾಘವೇಂದ್ರ ಧಾರವಾಡ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಶ್ರೀಗಳ ಕ್ಷಮೆ ಯಾಚಿಸಿ, ಭೋವಿ ಮತ್ತು ಲಂಬಾಣಿ ಸಮಾಜದವರು ಮೊದಲಿನಿಂದಲೂ ಹೊಂದಾಣಿಕೆಯಿಂದ ಹೋಗುತ್ತಿದ್ದು, ಇದೀಗ ನಡೆದ ಘಟನೆಯಿಂದ ಪೂಜ್ಯರಿಗೆ ನೋವಾಗಿದೆ. ಇದು ಮುಂದುವರೆಯುವದು ಬೇಡ. ಮುಂದೆ ಇಂತಹ ಘಟನೆಗಳು ನಡೆಯದಂತೆ ನೋಡಿಕೊಳ್ಳುತ್ತೇವೆ ಎಂದು ಮನವಿ ಮಾಡಿದರು.

### ಬಸವತತ್ವವನ್ನು ವೈದಿಕಗೊಳಿಸುವ ಹುನ್ನಾರಕ್ಕೆ ಜಾಗತಿಕ ಲಿಂಗಾಯತ ಮಹಾಸಭೆ ಖಂಡನೆ

## ಲಿಂಗಾಯತದ ಮೂಲ ಆಶಯವೇ ಬುಡಮೇಲು

■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಧರ್ಮವನ್ನು ವೈದಿಕಗೊಳಿಸುವ ಹುನ್ನಾರಕ್ಕೆ ಶತಮಾನಗಳ ಇತಿಹಾಸವಿದ್ದು, ಅದರ ಮುಂದುವರೆದ ಭಾಗವಾಗಿ ಇತ್ತೀಚೆಗೆ ಸದಾಶಿವಾನಂದ ಮಹಾಸ್ವಾಮಿಗಳು ಸಂಪಾದನೆ ಮಾಡಿರುವ 'ವಚನ ದರ್ಶನ' ಕೃತಿಯಲ್ಲಿ ಲಿಂಗಾಯತದ ಮೂಲ ಆಶಯವನ್ನೇ ಬುಡಮೇಲು ಮಾಡುವ ಆಕ್ಷೇಪಾರ್ಹ ಲೇಖನಗಳಿವೆ. ಜಾಗತಿಕ ಲಿಂಗಾಯತ ಮಹಾಸಭೆ ಇದನ್ನು ಬಲವಾಗಿ ಖಂಡಿಸುತ್ತದೆ ಎಂದು ಜಾಗತಿಕ ಲಿಂಗಾಯತ ಮಹಾಸಭೆ ಮಹಾಪ್ರಧಾನ ಕಾರ್ಯದರ್ಶಿ ಡಾ. ಎಸ್.ಎಂ ಜಾಮದಾರ ನುಡಿದರು.

ಅವರು ಭಾನುವಾರ ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 'ವಚನ ದರ್ಶನ' ಕೃತಿಯನ್ನು ರಾಜ್ಯದ ನಾನಾ ಭಾಗಗಳಲ್ಲಿ ಬಿಡುಗಡೆ ಮಾಡುತ್ತಿದ್ದು, ಆ ಸಮಾರಂಭಗಳಲ್ಲಿ ಬಸವತತ್ವದ ಕುರಿತು ಆರ್‌ಎಸ್‌ಎಸ್ ಶಾಖೆಯ ಪ್ರಚಾರಕರೆಲ್ಲ ಮನಬಂದಂತೆ ಮಾತನಾಡುತ್ತಿದ್ದಾರೆ. ವಚನಗಳು ರಚಿತವಾಗಿಲ್ಲ, ಬದಲಾಗಿ ಅವೇ ಸೃಜಿತವಾಗಿವೆ ಎಂದೂ, ವಚನ ಚಳುವಳಿಯೇ ನಡೆದಿಲ್ಲ ಎಂದೂ ಐತಿಹಾಸಿಕ ಸತ್ಯವನ್ನು ಮರೆಮಾಚುತ್ತಿದ್ದಾರೆ. ವಚನ ಚಳುವಳಿಯೇ ನಡೆದಿಲ್ಲವೆಂದಾದರೆ ಸಾವಿರಾರು ಶರಣರ ಕಗ್ಗೊಲೆ ಯಾಕಾಯಿತು ಎಂದು ಪ್ರಶ್ನಿಸಿದರು.

ನಿರಾಕಾರ ದೇವರನ್ನು ಪೂಜಿಸುವರೆಲ್ಲ ಹಿಂದೂಗಳು ಎಂದು ಸದಾಶಿವಾನಂದ ಸ್ವಾಮೀಜಿ ಸೇರಿದಂತೆ ಹಲವರು ಹೇಳುತ್ತಿದ್ದಾರೆ. ಹಾಗಾದರೆ ಕ್ರೈಸ್ತ, ಮುಸ್ಲಿಂ ಎಲ್ಲರೂ ಹಿಂದೂಗಳೇ ಎಂದು ಪ್ರಶ್ನಿಸಿದರು. ಇದುವರೆಗೂ 23 ಸಾವಿರ ವಚನಗಳು ಲಭ್ಯವಾಗಿವೆ. ಕೆಲವು ವಚನಗಳಲ್ಲಿ ಸಂಸ್ಕೃತದ ಉಲ್ಲೇಖ ಇದೆ. ಅಂದ ಮಾತ್ರಕ್ಕೆ ಎಲ್ಲಾ ವಚನಗಳ ವೇದ, ಆಗಮಗಳ ರೂಪವೇ ಆಗಿದೆ ಎನ್ನುವ ಇವರಿಗೆ ಅಧ್ಯಯನದ ಕೊರತೆ ಇದೆ.

ವಚನ ದರ್ಶನ ಕೃತಿಯಲ್ಲಿ ಬಸವೇಶ್ವರ ಭಾವಚಿತ್ರವೂ ವಿಕೃತಗೊಂಡಿದ್ದು, ಈ ಕೃತಿಯನ್ನು ವಿರೋಧಿಸುವ ಪ್ರಜ್ಞಾವಂತರ ಮೇಲೆ ಬಲಪ್ರಯೋಗವನ್ನೂ ಮಾಡುವ ಕಾರ್ಯವನ್ನು ಆ ಸ್ವಾಮೀಜಿಗಳೂ ಸೇರಿ ಆರ್‌ಎಸ್‌ಎಸ್‌ನವರು ಮಾಡುತ್ತಿದ್ದಾರೆ.

ಇಂಥ ಕೃತ್ಯವನ್ನು ಜಾಗತಿಕ ಲಿಂಗಾಯತ ಮಹಾಸಭೆ ತೀವ್ರವಾಗಿ ಖಂಡಿಸುತ್ತದೆ ಎಂದರು.

ನಿವೃತ್ತ ನ್ಯಾಯಾಧೀಶರಾದ ಕೆಂಪಣ್ಣಗೌಡರ ಮಾತನಾಡಿ, ಸಂವಿಧಾನದ ಅನ್ವಯ ಯಾವುದೇ ಧರ್ಮವನ್ನು ಪಾಲಿಸಲು ಅವಕಾಶ ಇದ್ದು, ಬಸವವತ್ವದವರಾದ ನಮಗೆ ನೀವು ಹಿಂದೂಗಳೇ ಎಂದು ಆದೇಶ ಹೊರಡಿಸುವ ಅಧಿಕಾರ ಯಾರಿಗೂ ಇಲ್ಲ. ಹಿಂದೂ ಎನ್ನುವುದು ರಾಷ್ಟ್ರದ ಸಂಕೇತವಾಗಿದ್ದು ಯಾವತ್ತೂ ಅದು ಧಾರ್ಮಿಕ ಸಂಕೇತ ಅಲ್ಲವೇ ಅಲ್ಲ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಸವರಾಜ ಧನ್ನೂರ, ಬಸವರಾಜ ರೊಟ್ಟಿ, ಜಿ.ಬಿ. ಪಾಟೀಲ, ಪ್ರಭುಲಿಂಗ ಮಾಧವರ, ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಕೆ.ಎಸ್. ಚಟ್ಟಿ, ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ, ಅಶೋಕ ಬರಗುಂಡಿ, ಗುಂಡುಶೆಟ್ಟಿ, ಬಸವರಾಜ ಬುಳ್ಳಾ, ಪ್ರಕಾಶ ಅಸುಂಡಿ, ಶ್ರೀದೇವಿ, ಸವಿತಾ ನಡಕಟ್ಟಿನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



### ವಾರ್ಷಿಕ ಮಹಾಸಭೆಯ ನಿರ್ಣಯಗಳು

ಜಾಗತಿಕ ಲಿಂಗಾಯತ ಮಹಾಸಭಾದ 5ನೇ ವಾರ್ಷಿಕ ಸಭೆಯಲ್ಲಿ ಕೈಕೊಂಡ ನಿರ್ಣಯಗಳ ಕುರಿತು ಡಾ. ಎಸ್.ಎಂ ಜಾಮದಾರ ವಿವರಿಸಿದರು. ಸದ್ಯದಲ್ಲೇ ರಾಜ್ಯಾದ್ಯಂತ ಹೊಸ ಪದಾಧಿಕಾರಿಗಳನ್ನು ಚುನಾವಣೆ ಮೂಲಕ ಆರಿಸುವ, ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಸಾಂವಿಧಾನಿಕ ಮಾನ್ಯತೆ ಕುರಿತು ವಿಚಾರ ಸಂಕೀರ್ಣ ಏರ್ಪಡಿಸುವ ಹಾಗೂ 'ವಚನ ದರ್ಶನ' ಕೃತಿಯ ವಿರುದ್ಧ ಹೋರಾಟದ ರೂಪುರೇಷೆ ಹಾಕಿಕೊಳ್ಳಲಾಯಿತು.

## ಪೂಜಾಗೆ ಸುವರ್ಣ ಪದಕ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಕಾಲೇಜಿನ ಸ್ನಾತಕೋತ್ತರ ಪದವಿ ವಿದ್ಯಾರ್ಥಿನಿ ಪೂಜಾ ವಿನಾಯಕ ಗ್ರಾಮಪುರೋಹಿತ ಅವರು ಎಂ.ಎ ಕನ್ನಡ ವಿಭಾಗದಲ್ಲಿ ಸುವರ್ಣ ಪದಕಕ್ಕೆ ಭಾಜನರಾಗಿದ್ದಾರೆ.

ಶೈಕ್ಷಣಿಕ ವರ್ಷದ ಎಂ.ಎ ಕನ್ನಡ ವಿಷಯದಲ್ಲಿ ಸೆ. 24ರಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ 74ನೇ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಅಧ್ಯಯನ ಪೀಠವು ಕೊಡಮಾಡುವ ಧಾರವಾಡ ಮುರುಘಾಮಠದ ಮಹಾಂತ ಸ್ವಾಮೀಜಿ ಸುವರ್ಣ ಪದಕ ನೀಡಿ ಗೌರವಿಸಲಿದ್ದಾರೆ ಎಂದು ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭಿನಂದನೆ:ಸ್ನಾತಕೋತ್ತರ ವಿಭಾಗದಲ್ಲಿ ಸುವರ್ಣ ಪದಕ ಪಡೆದಿರುವ ಪೂಜಾ ಗ್ರಾಮಪುರೋಹಿತ ಅವರನ್ನು ಅಖಿಲ ಕರ್ನಾಟಕ ಬ್ರಾಹ್ಮಣ ಸಭಾದ ಅಧ್ಯಕ್ಷ ಅಶೋಕ ಹಾರ್ನಹಳ್ಳಿ, ಸಂಘಟನಾ ಕಾರ್ಯದರ್ಶಿ ವಿಜಯ ನಾಡಜೋಷಿ, ಡಾ. ಜಿ.ಕೆ. ಕಾಳೆ ಮುಂತಾದವರು ಅಭಿನಂದಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಸೆ. 25ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಕಾರಣ, 110 ಕೆವ್ಹಿ ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ನಗರ/ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ, ಎನ್.ಜೆ.ವೈ ಫೀಡರ್, ಐ.ಪಿ.ಪಿ ಫೀಡರ್ ಹಾಗೂ ಮೆ: ಬಿ.ಪಿ.ಸಿ.ಎಲ್ 1 ಮತ್ತು 2, ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ವಿನಂತಿಸಿದೆ.

## ಪ್ರತಿಭಟನೆ ಕೈಬಿಟ್ಟ ಕುಮಾರ ಶ್ರೀಗಳು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆದರಹಳ್ಳಿ ಘಟನೆಗೆ ಸಂಬಂಧಿಸಿದಂತೆ ರವಿವಾರ ಮುಂಜಾನೆಯಿಂದ ಗವಿಸಿದ್ದೇಶ್ವರ ಮಠದ ಕುಮಾರ ಮಹಾರಾಜರು ಘಟನೆಗೆ ಕಾರಣರಾದವರನ್ನು ಬಂಧಿಸುವಂತೆ ಆಗ್ರಹಿಸಿ ಪ್ರತಿಭಟನೆ ಕೈಗೊಂಡಿದ್ದು, ಭೋವಿ, ಲಂಬಾಣಿ ಹಾಗೂ ಪೋಲೀಸ್ ಅಧಿಕಾರಿಗಳು ಮತ್ತು ಮುಖಂಡರ ಸಂಧಾನದ ಮೇಲೆ ಪ್ರತಿಭಟನೆ ಕೈಬಿಟ್ಟಿದ್ದು ಗಲಾಟೆ ವಿಷಯವು ಶಾಂತಿಯುತವಾಗಿ ಬಗೆಹರಿದಿದೆ. ಎಲ್ಲರ ಭರವಸೆ ಮೇರೆಗೆ ಪ್ರತಿಭಟನೆಯನ್ನು ಶ್ರೀಗಳು ಹಿಂತೆಗೆದುಕೊಂಡರು.

ಭೋವಿ ಮತ್ತು ಲಂಬಾಣಿ ಸಮಾಜದ ಯುವಕರು 2-3 ದಿನಗಳ ಹಿಂದೆ ಮಾಡಿಕೊಂಡಿದ್ದ ಗಲಾಟೆ ಸಮಾಜಗಳ ನಡುವೆ ದೊಡ್ಡ ಪ್ರಮಾಣದಲ್ಲಿ ಬೆಳೆದು ನಿಂತಿತ್ತು, ಶ್ರೀಗಳು ಇದರಲ್ಲಿ ಮಧ್ಯಪ್ರವೇಶಿಸಿ ಹೋರಾಟಕ್ಕೆ ಮುಂದಾಗಿದ್ದರು. ಆದರೆ ಹಿರಿಯರು ಸೇರಿ ಮದ್ಯಾಹ್ನದಿಂದಲೇ ಮಾತುಕತೆ ನಡೆಸಿ ರಾಜಿ ಸಂಧಾನ ಮಾಡುವಲ್ಲಿ ಯಶಸ್ವಿಯಾದರು.

ಕೆಲವು ವಿಷಯಗಳಿಗೆ ಸಂಬಂಧಿಸಿದಂತೆ ಪರಸ್ಪರ ಹೊಂದಾಣಿಕೆ ಮಾತುಗಳು ನಡೆದು, ಎರಡೂ ಕಡೆಯವರು ಒಪ್ಪಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಮಂಜುನಾಥ ಮಾಗಡಿ, ನೀಲಪ್ಪ ಶರಸೂರಿ, ಪಿಎಸ್‌ಐ ಈರಪ್ಪ ರಿತ್ತಿ, ಭೋವಿ ಮತ್ತು ಲಂಬಾಣಿ ಸಮಾಜದ ಮುಖಂಡರು, ಯುವಕರು ಗ್ರಾಮಸ್ಥರು ಇದ್ದರು.

## ಸೆ.24ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಹಯೋಗದಲ್ಲಿ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ-2024 ದ ಉದ್ಘಾಟನಾ ಸಮಾರಂಭವನ್ನು ಸೆಪ್ಟೆಂಬರ 24 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯದರ್ಶಿ ರಂದೀಪ್ ಡಿ, ಆಹಾರ , ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

## ಸೆ.28ರಂದು ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಇವರ ಸಹಯೋಗದಲ್ಲಿ ಬೆಳಗಾವಿ ವಿಭಾಗ ಮಟ್ಟದ ಹಾಕಿ, ಫುಟ್ಬಾಲ್ ಮತ್ತು ಕಬಡ್ಡಿ ದಸರಾ ಕ್ರೀಡಾಕೂಟ-2024 ನ್ನು ಸೆಪ್ಟೆಂಬರ್ 28 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯದರ್ಶಿ ರಂದೀಪ್ ಡಿ, ಆಹಾರ , ನಾಗರಿಕ ಸರರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

ಕ್ರಿಡಾಕೂಟಗಳ ವಿವರ : ಹಾಕಿ :- ಸೆ 28 ರಂದು ಬೆಳಿಗ್ಗೆ 9 ಗಂಟೆಗೆ ಬೆಟಗೇರಿಯ ಮಹಾತ್ಮಾಗಾಂಧಿ ಹಾಕಿ ಕ್ರೀಡಾಂಗಣ

ಫುಟ್‌ಬಾಲ್ : ಸೆ 28ರಂದು ಬೆಳಿಗ್ಗೆ 9ಗಂಟೆಗೆ ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣ ಕಬಡ್ಡಿ ; ಸೆ 28 ರ ಶನಿವಾರ ಬೆ 9 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿನ ಒಳಾಂಗಣ ಕ್ರೀಡಾಂಗಣ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka